ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೭೮

**ಪಟ್ಟಿ – ೧೧**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಸೋಮವಾರ, ದಿನಾಂಕ: ೧೩ನೇ ಜುಲೈ, ೨೦೧೫**

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

**ದಿಂಬು ಮಂಚಗಳ ಖರೀದಿಯಲ್ಲಿ ಅವ್ಯವಹಾರ ಕುರಿತು**

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೧೭೪ (೧೫೯೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಿಗೆ ಇತ್ತೀಚೆಗೆ ಹಾಸಿಗೆ, ದಿಂಬು, ಮಂಚ ಇತ್ಯಾದಿಗಳನ್ನು ಮಾರುಕಟ್ಟೆ ದರಕ್ಕಿಂತ ಅಧಿಕ ಮೌಲ್ಯ ನೀಡಿ ಸರ್ಕಾರ ಖರೀದಿಸಿದೆ ಎಂದು ದೂರುಗಳು ಬಂದಿರುವುದು ನಿಜವೇ ;

(ಆ) ಖರೀದಿ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಯಾರ್‍ಯಾರು ; ಕೈಗೊಂಡ ಕ್ರಮಗಳೇನು ?

**ಶಿಶು ಭ್ರೂಣ ಹತ್ಯೆ ಪ್ರಕರಣಗಳ ಕುರಿತು**

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೦೭೫ (೧೨೫೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಶು ಭ್ರೂಣ ಹತ್ಯೆ ಮತ್ತು ಭ್ರೂಣ ಪತ್ತೆ ಮಾಡುವುದು ಕಾನೂನು ಬಾಹಿರವಾಗಿದ್ದರೂ, ನಿರಂತರವಾಗಿ ನಡೆಯುತ್ತಲೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇತ್ತೀಚೆಗೆ ಬೆಳಕಿಗೆ ಬಂದ ಪ್ರಕರಣಗಳ ಸಂಖ್ಯೆ ಎಷ್ಟು; ಆರೋಪಿಗಳ ವಿರುದ್ಧ ಯಾವ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗಿದೆಯೇ;

(ಇ) ಶಿಶು ಭ್ರೂಣ ಪತ್ತೆ ಮತ್ತು ಭ್ರೂಣ ಹತ್ಯೆಗೆ ಸಹಕರಿಸಿದ ಎಷ್ಟು ವೈದ್ಯರು ಮತ್ತು ಆಸ್ಪತ್ರೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ; (ಜಿಲ್ಲಾವಾರು ಮಾಹಿತಿ ಒದಗಿಸಿ)

(ಈ) ಶಿಶು ಭ್ರೂಣ ಪತ್ತೆ/ಹತ್ಯೆಯ ಕಡ್ಡಾಯ ನಿಷೇಧ ಹಾಗೂ ಅನುಷ್ಠಾನದ ಕುರಿತು ಚಿಂತಿಸಲಾಗಿದೆಯೇ;

(ಉ) ಶಿಶು ಭ್ರೂಣ ಪತ್ತೆ ಮತ್ತು ಭ್ರೂಣ ಹತ್ಯೆ ತಡೆಗೆ ಸರ್ಕಾರದ ವತಿಯಿಂದ ಪ್ರಚಾರ/ಅರಿವು ನೀಡಲಾಗುತ್ತಿದೆಯೇ?

**ಪರಿಶಿಷ್ಟ ಜಾತಿ / ವರ್ಗದ ನಿರುದ್ಯೋಗಿ ಯುವಕರಿಗೆ ಉದ್ಯೋಗ**

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭೬ (೧೨೫೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನಿರುದ್ಯೋಗಿ ಯುವಕರಿಗೆ ಸರ್ಕಾರ ಸ್ವಯಂ ಉದ್ಯೋಗ ಕಲ್ಪಿಸಲು ತೆಗೆದುಕೊಂಡ ಕ್ರಮವೇನು;

(ಆ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಜನ ಪರಿಶಿಷ್ಟ ಜಾತಿ / ವರ್ಗದ ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ; ಇದಕ್ಕಾಗಿ ವೆಚ್ಚ ಮಾಡಿರುವ ಅನುದಾನ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಬಿ.ಪಿ.ಎಲ್ ಕಾರ್ಡ್ ಒದಗಿಸುವ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭೭ (೧೨೫೬) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಹಾಗೂ ವಿಜಯಪುರ ಅವಳಿ ಜಿಲ್ಲೆಯಲ್ಲಿ ಬಿ.ಪಿ.ಎಲ್ ಕಾರ್ಡುಗಳನ್ನು ಪಡೆಯಲು ಒಟ್ಟು ಸ್ವೀಕೃತವಾಗಿರುವ ಅರ್ಜಿಗಳು ಎಷ್ಟು; ಅವುಗಳಲ್ಲಿ ಎಷ್ಟು ಜನರಿಗೆ ಬಿ.ಪಿ.ಎಲ್ ಕಾರ್ಡುಗಳನ್ನು ವಿತರಿಸಲಾಗಿದೆ; ಎಷ್ಟು ಅರ್ಜಿಗಳು ತಿರಸ್ಕರಿಸಲ್ಪಟ್ಟಿವೆ; ಬಾಕಿ ಇರುವ ಅರ್ಜಿಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅವಳಿ ಜಿಲ್ಲೆಗಳಲ್ಲಿ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡುದಾರರಿಗೆ ಒಟ್ಟು ಎಷ್ಟು ಪಡಿತರ ಅಕ್ಕಿ ವಿತರಣೆಯಾಗುತ್ತಿದೆ; ಅದರಲ್ಲಿ ಪ್ರತಿ ಜಿಲ್ಲೆ ಮತ್ತು ಪ್ರತಿ ತಾಲ್ಲೂಕಿಗೆ ಎಷ್ಟು ಪಡಿತರ ಅಕ್ಕಿ ವಿತರಿಸಲಾಗುವುದು ? (ವಿವರ ನೀಡುವುದು)

## ಶಾಸಕರ ಕ್ಷೇತ್ರಾಭಿವೃದ್ಧಿ ಅನುದಾನ ಬಳಕೆ ವಿಳಂಬವಾಗುವ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭೮ (೧೨೭೪) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಧಾನ ಪರಿಷತ್ ಸದಸ್ಯರ ಪೈಕಿ ತಮ್ಮ ಕ್ಷೇತ್ರಾಭಿವೃದ್ಧಿ ಅನುದಾನ ಬಳಕೆ ಮಾಡಿರುವ ಸದಸ್ಯರ ಸಂಖ್ಯೆ ಎಷ್ಟು; ಇನ್ನೂ ಬಳಕೆಯಾಗದೇ ಬಾಕಿ ಉಳಿದ ಅನುದಾನ ಎಷ್ಟು; (ವಿವರ ನೀಡುವುದು)

(ಆ) ಶಾಸಕರ ಅನುದಾನಗಳ ಬಳಕೆಯಲ್ಲಿ ಅಧಿಕಾರಿಗಳ ವಿಳಂಬ ನೀತಿಯಿಂದ ಕೆಲಸಗಳು ತಡವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತ್ವರಿತಗತಿಯಲ್ಲಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಇ) ಶಾಸಕರ ಅನುದಾನದ ಕೆಲಸಗಳಲ್ಲಿ ರಾಜಸ್ವ ತೆರಿಗೆ, ಆದಾಯ ತೆರಿಗೆ, ಮಾರಾಟ ತೆರಿಗೆ ಸೇರಿ ಎಷ್ಟು ಕಡಿತಗೊಳಿಸಲಾಗುವುದು; ಅಧಿಕಾರಿಗಳು ಸರ್ಕಾರ ನಿಗಧಿಪಡಿಸಿದ ಮೊತ್ತಕ್ಕಿಂತ ಹೆಚ್ಚಿಗೆ ಕಡಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅಂತಹ ಎಷ್ಟು ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗಿದೆ?

## ಮದುವೆ ದಿಬ್ಬಣಗಳಿಗೆ ಲಾರಿ ಬಳಕೆ ನಿಷೇಧಿಸಿ ಕ್ರಮಕೈಗೊಳ್ಳುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)) –**

೧೦೭೯ (೧೨೫೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಹುತೇಕ ಗ್ರಾಮೀಣ ಪ್ರದೇಶಗಳಲ್ಲಿ ಮದುವೆ ದಿಬ್ಬಣಗಳಿಗೆ ಲಾರಿಗಳನ್ನು ಉಪಯೋಗಿಸುತ್ತಿದ್ದು ಇದು ಅಪಾಯಕಾರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಆ) ಗ್ರಾಮೀಣ ಜನರ ಸುರಕ್ಷತೆ ದೃಷ್ಟಿಯಿಂದ ಮದುವೆ ದಿಬ್ಬಣಗಳಲ್ಲಿ ಜನರನ್ನು ಲಾರಿಗಳಲ್ಲಿ ಸಾಗಿಸುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಗ್ರಾಮೀಣ ಬಡ ಜನರಿಗೆ ಅನುಕೂಲವಾಗುವಂತೆ ಮದುವೆ ಸಮಾರಂಭಗಳಿಗೆ ರಿಯಾಯಿತಿ ದರದಲ್ಲಿ ಸಾರಿಗೆ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸಕಲೇಶಪುರದ ಅಂಬೇಡ್ಕರ್ ಭವನ ಕಾಮಗಾರಿ ಪೂರ್ಣಗೊಳಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೮೦ (೧೨೫೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಕಲೇಶಪುರ ಪಟ್ಟಣದ ಕುಶಾಲನಗರ ಬಡಾವಣೆಯಲ್ಲಿ ನಿರ್ಮಾಣವಾಗುತ್ತಿರುವ ಅಂಬೇಡ್ಕರ್ ಭವನ ಕಾಮಗಾರಿ ಪ್ರಾರಂಭವಾಗಿ ಎಷ್ಟು ವರ್ಷಗಳಾಗಿವೆ; ಮತ್ತು ಇದಕ್ಕೆ ವ್ಯಯಿಸಿರುವ ಹಣವೆಷ್ಟು;

(ಆ) ಅಂಬೇಡ್ಕರ್ ಭವನದ ಕಾಮಗಾರಿ ಕಳಪೆ ಗುಣಮಟ್ಟದ್ದಾಗಿದೆ ಎಂಬ ದೂರು ಇದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಅಂಬೇಡ್ಕರ್ ಭವನ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಉತ್ತರ ಕರ್ನಾಟಕದ ಡಿ.ಹೆಚ್.ಸಿ., ಸಿ.ಹೆಚ್.ಸಿ.ಗಳ ಸಿಬ್ಬಂದಿ ನೇಮಕಾತಿ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೮೧ (೧೨೭೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದಲ್ಲಿರುವ ಒಟ್ಟು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು;

(ಆ) ಆರೋಗ್ಯ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ಸಂಖ್ಯೆ ಎಷ್ಟು; ಆ ಪೈಕಿ ಮಂಜೂರಾದ ಹುದ್ದೆ, ಭರ್ತಿಯಾದ ಹುದ್ದೆ, ಹೊರಗುತ್ತಿಗೆ ಆಧಾರದ ಮೇಲೆ ನೇಮಕವಾದ ಹುದ್ದೆ, ಖಾಲಿಯಿರುವ ಹುದ್ದೆಗಳು ಯಾವುವು;

(ಇ) ಹುದ್ದೆಗಳು ಖಾಲಿಯಿದ್ದಲ್ಲಿ ರೋಗಿಗಳಿಗೆ ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡಲು ಸಮಸ್ಯೆಯಾಗುವುದಿಲ್ಲವೇ;

(ಈ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪರೀಕ್ಷೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೮೨ (೧೨೬೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ಸುರಕ್ಷತೆ ಹಾಗೂ ಗುಣಮಟ್ಟವನ್ನು ಪರೀಕ್ಷಿಸುವ ಪ್ರಾಧಿಕಾರ ಇರುವುದು ನಿಜವೇ; ಇದ್ದಲ್ಲಿ, ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ, ಅಧಿಕಾರಿಗಳು ಎಷ್ಟು; (ಮಾಹಿತಿ ನೀಡುವುದು)

(ಆ) ಕೇಂದ್ರ ಸರ್ಕಾರವು ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಪ್ರಾಧಿಕಾರ ತಿರಸ್ಕರಿಸಿರುವ ಆಹಾರ ಉತ್ಪನ್ನಗಳು ಎಷ್ಟು; ಯಾವುವು; ಈ ಉತ್ಪನ್ನದ ಕಂಪನಿಗಳು ಯಾವುವು; ಯಾವ ಅವಧಿಯಿಂದ ಇಂತಹ ಉತ್ಪನ್ನಗಳನ್ನು ಹಾನಿಕಾರಕವೆಂದು ಪರಿಗಣಿಸಲಾಗಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಆಹಾರ ಉತ್ಪನ್ನಗಳನ್ನು ಕಾಲಕಾಲಕ್ಕೆ ಪರೀಕ್ಷಿಸುವ ಆಹಾರ ಸುರಕ್ಷತಾ ಅಧಿಕಾರಿಗಳ. ಸಿಬ್ಬಂದಿಗಳ ಕೊರತೆಯಿರುವುದು ನಿಜವೇ; ಹಾಗಿದ್ದಲ್ಲಿ, ಈ ಕುರಿತಾಗಿ ಕೈಗೊಂಡ ಕ್ರಮಗಳು ಏನು; (ಮಾಹಿತಿ ಒದಗಿಸುವುದು)

(ಈ) ಆಹಾರ ಸುರಕ್ಷತೆ ನಿಯಮಗಳನ್ನು ಉಲ್ಲಂಘಿಸುವ ಸಂಸ್ಥೆ, ಉತ್ಪನ್ನಗಳ ವಿರುದ್ಧ ಕ್ರಮ ಜರುಗಿಸಲಾಗುತ್ತಿದೆಯೇ; ಹಾಗಿದ್ದಲ್ಲಿ, ಈವರೆವಿಗೆ ಇಂತಹ ಸಂಸ್ಥೆಗಳ ಮೇಲೆ ನಿಗಾ ವಹಿಸುವ ಮತ್ತು ಕೈಗೊಂಡ ಕ್ರಮಗಳು ಏನು? (ಸಂಪೂರ್ಣ ಮಾಹಿತಿ ಒದಗಿಸುವುದು)

## ಎನ್.ಜಿ.ಓ ಗಳು ಸಂಗ್ರಹಿಸುತ್ತಿರುವ ದೇಣಿಗೆ ಮತ್ತು ಆರ್ಥಿಕ ಅವ್ಯವಹಾರ ತಡೆ ಬಗ್ಗೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೮೩ (೧೨೬೨) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿವಿಧ ಕ್ಷೇತ್ರಗಳಲ್ಲಿ ತೊಡಗಿಸಿಕೊಂಡಿರುವ ಸ್ವಯಂ ಸೇವಾ ಸಂಸ್ಥೆ (ಎನ್.ಜಿ.ಓ)ಗಳ ಮಾಹಿತಿ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ, ಅವುಗಳು ಕಾರ್ಯನಿರ್ವಹಿಸುತ್ತಿರುವ ಕ್ಷೇತ್ರ, ಚಟುವಟಿಕೆಗಳು, ಸಂಸ್ಥೆಯ ಉದ್ದೇಶ ಕುರಿತ ಮಾಹಿತಿ ಒದಗಿಸುವುದು;

(ಆ) ಈ ಎನ್.ಜಿ.ಓ.ಗಳು ಸಂಗ್ರಹಿಸುತ್ತಿರುವ ವಿದೇಶಿ ಹಾಗೂ ಸ್ವದೇಶದ ದೇಣಿಗೆಯನ್ನು ಯಾವ ಯಾವ ಕಾರ್ಯಕ್ರಮಗಳಿಗಾಗಿ ಬಳಕೆ ಮಾಡಲಾಗುತ್ತಿದೆ; ಈ ಕುರಿತು ಎನ್.ಜಿ.ಓ.ವಾರು ಪ್ರತ್ಯೇಕ ಮಾಹಿತಿ ಒದಗಿಸುವುದು;

(ಇ) ಆರ್ಥಿಕ ಅವ್ಯವಹಾರ, ಹಣ ದುರುಪಯೋಗ ಮತ್ತು ರಾಜ್ಯ, ದೇಶದ ಅಭಿವೃದ್ಧಿ ಕಾರ್ಯಗಳ ವಿರುದ್ಧ ಕಾರ್ಯನಿರ್ವಹಿಸುತ್ತಿರುವ ಎನ್.ಜಿ.ಓ.ಗಳ ಮಾಹಿತಿ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು;

(ಈ) ಇತ್ತೀಚೆಗೆ ಹಲವಾರು ಎನ್.ಜಿ.ಓಗಳನ್ನು ಕೇಂದ್ರ ಸರ್ಕಾರ ಹಲವು ಕಾರಣಗಳಿಗಾಗಿ ನಿಷೇದಿಸಿದ್ದು, ಅದರಂತೆ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಷ್ಟು ಎನ್.ಜಿ.ಓಗಳು ನಿಷೇಧಕ್ಕೆ ಒಳಗಾಗಿವೆ? (ಸಂಪೂರ್ಣ ಮಾಹಿತಿ ಒದಗಿಸುವುದು)

## ನೆಸ್ಲೆ ಕಂಪನಿಯ ಆಹಾರ ಪದಾರ್ಥಗಳಲ್ಲಿ ಹಾನಿಕಾರಕ ಅಂಶಗಳಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)** –

೧೦೮೪ (೧೨೭೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನೆಸ್ಲೆ ಕಂಪನಿಯ ಕೆಲವು ಆಹಾರ ಪದಾರ್ಥದ ಹಾನಿಕಾರಕ ಪದಾರ್ಥಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸದರಿ ಕಂಪನಿಯ ವಿರುದ್ಧ ಕೈಗೊಂಡಿರುವ ಕ್ರಮಗಳೇನು;

(ಆ) ರಾಜ್ಯದಲ್ಲಿರುವ ಪಾನೀಯ ಕಂಪನಿಗಳು ಎಷ್ಟು; ಇವು ಉಪಯೋಗಿಸಲು ಯೋಗ್ಯವಾಗಿದೆಯೇ; ಇದರಲ್ಲಿ ಎಷ್ಟು ಹಾನಿಕಾರಕ ಪದಾರ್ಥಗಳಿವೆ;

(ಇ) ಸದರಿ ಕಂಪನಿಯ ಯಾವ ಯಾವ ಬ್ರಾಂಡಿನ ಅಡುಗೆ ಎಣ್ಣೆ / ಪಾನೀಯಗಳು ಮಾರುಕಟ್ಟೆಯಲ್ಲಿವೆ; ಇವು ಉಪಯೋಗಿಸಲು ಯೋಗ್ಯವಾಗಿದೆಯೇ;

(ಈ) ಸದರಿ ಆಹಾರ ಪದಾರ್ಥಗಳಲ್ಲಿ ಎಷ್ಟು ಹಾನಿಕಾರಕ ಅಂಶವಿದೆ ಎಂಬುದರ ಬಗ್ಗೆ ಪರೀಕ್ಷೆ ನಡೆಸಲಾಗಿದೆಯೇ;

(ಉ) ಇಲ್ಲದಿದ್ದಲ್ಲಿ, ರಾಜ್ಯದ ಮಾರುಕಟ್ಟೆಯಲ್ಲಿರುವ ಹಾಗೂ ಹೊಸದಾಗಿ ಮಾರುಕಟ್ಟೆಗೆ ಬರುವ ಪ್ರತಿಯೊಂದು ಆಹಾರ ಪದಾರ್ಥಗಳನ್ನು ರಾಜ್ಯದ ಜನತೆಯ ಆರೋಗ್ಯದ ಹಿತದೃಷ್ಟಿಯಿಂದ ಪರೀಕ್ಷೆಗೆ ಒಳಪಡಿಸಲು ಕ್ರಮ ಜರುಗಿಸಲಾಗುವುದೇ?

**ಕೊಳವೆ ಬಾವಿಗಳಿಗೆ ಪಂಪ್‌ಸೆಟ್ ಅಳವಡಿಸುವ ಬಗ್ಗೆ**

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)** –

೧೦೮೫ (೧೨೭೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೧೩-೧೪ ಮತ್ತು ೨೦೧೪-೧೫ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ನಿಗಮ, ಅಲ್ಪಸಂಖ್ಯಾತರ ನಿಗಮ ಮತ್ತು ಡಿ. ದೇವರಾಜು ಅರಸು ನಿಗಮಗಳಿಂದ ಕೊರೆದ ಕೊಳವೆ ಬಾವಿಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೊರದ ಕೊಳವೆ ಬಾವಿಗಳಿಗೆ ಪಂಪ್‌ಸೆಟ್ ಅಳವಡಿಸಲಾಗಿದೆಯೆ; ಹಾಗಿದ್ದಲ್ಲಿ ಎಷ್ಟು ಪಂಪ್‌ಸೆಟ್ಟುಗಳನ್ನು ಅಳವಡಿಸಲಾಗಿದೆ; ಬಾಕಿ ಇರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು;

(ಇ) ಸದರಿ ಕೊಳವೆ ಬಾವಿಗಳಿಗೆ ಪಂಪ್‌ಸೆಟ್ಟುಗಳನ್ನು ಯಾವ ಕಾಲಮಿತಿಯೊಳಗೆ ಅಳವಡಿಸಲಾಗುವುದು;

(ಈ) ಕೊರೆದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕೊಟ್ಟಿರುವುದೆಷ್ಟು; ಉಳಿದವುಗಳೆಷ್ಟು; ಇವುಗಳಿಗೆ ಸಂಪರ್ಕ ಒದಗಿಸಲಾಗುವುದು ಯಾವಾಗ?

## ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೮೬ (೧೨೬೪) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೩–೧೪, ೨೦೧೪–೧೫ನೇ ಸಾಲಿನಲ್ಲಿ ಹಿಂದುಳಿದ ವರ್ಗ/ಅಲ್ಪಸಂಖ್ಯಾತರ ನಿಗಮ/ದೇವರಾಜ್ ಅರಸ್ ಈ ನಿಗಮದಿಂದ ಮಂಜೂರಾದ ಕೊರೆದ ಬಾವಿಗಳೆಷ್ಟು; (ತಾಲ್ಲೂಕುವಾರು, ಫಲಾನುಭವಿಗಳ ಹೆಸರು ಸಮೇತ ನಿಗಮವಾರು ವಿವರ ಒದಗಿಸಿ)

(ಆ) ಈ ಕೊಳವೆ ಬಾವಿಗಳನ್ನು ಕೊರೆಯಿಸಲು ಯಾರಿಗೆ ಗುತ್ತಿಗೆ ನೀಡಲಾಗಿದೆ; ಗುತ್ತಿಗೆದಾರರ ಹೆಸರು ಸಮೇತ ವಿವರ ಒದಗಿಸುವುದು ಮತ್ತು ಇವರಿಗೆ ಕೊಳವೆ ಬಾವಿ ಕೊರೆಯಿಸಲು ಎಷ್ಟು ಸಮಯವನ್ನು ನಿಗದಿಗೊಳಿಸಲಾಗಿದೆ; ನಿಗದಿತ ಅವದಿಯೊಳಗೆ ಎಲ್ಲಾ ಕೊಳವೆ ಬಾವಿಗಳನ್ನು ಕೊರೆದಿದ್ದಾರೆಯೇ; ಕೊರೆಯದೇ ಇದ್ದಲ್ಲಿ ಅವರ ಮೇಲೆ ಕೈಗೊಂಡ ಕ್ರಮಗಳೇನು;

(ಇ) ಮಂಜೂರಾದ ಕೊಳವೆ ಬಾವಿಗಳು ಎಷ್ಟು; ಇನ್ನೂ ಕೊರೆಯದಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು; (ಫಲಾನುಭವಿಗಳ ಹೆಸರು ಸಮೇತ ತಾಲ್ಲೂಕುವಾರು ವಿವರ ಒದಗಿಸುವುದು)

(ಈ) ಕೊರೆದ ಎಷ್ಟು ಕೊಳವೆ ಬಾವಿಗಳಿಗೆ ಪಂಪ್‌ಸೆಟ್ ಅಳವಡಿಸಲಾಗಿದೆ; ಅಳವಡಿಸಲು ಬಾಕಿ ಇರುವ ಕೊಳವೆ ಬಾವಿಗಳೆಷ್ಟು; ಯಾವ ಕಾಲಮಿತಿಯೊಳಗೆ ಅಳವಡಿಸಲಾಗುವುದು;

(ಉ) ಕೊರೆದ ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ನೀಡಿರುವುದೆಷ್ಟು; ಬಾಕಿ ಇರುವುದು ಎಷ್ಟು; ಇಲ್ಲದಿದ್ದಲ್ಲಿ ಯಾವ ಕಾಲಮಿತಿಯೊಳಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು?

**ರಾಜ್ಯದಲ್ಲಿರುವ ವಸತಿ ನಿಲಯಗಳ ರಿಪೇರಿಗಾಗಿ ಮೀಸಲಿಟ್ಟ ಹಣ.**

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೮೭ (೧೨೭೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ವಿದ್ಯಾರ್ಥಿ / ವಿದ್ಯಾರ್ಥಿನಿಯರ ವಸತಿ ನಿಲಯಗಳಿಗೆ ಪ್ರತಿ ವರ್ಷ ರಿಪೇರಿಗಾಗಿ ಖರ್ಚು ಮಾಡಲು ಮೀಸಲಿಟ್ಟ ಹಣವೆಷ್ಟು; (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು)

(ಆ) ಹಾವೇರಿ ಜಿಲ್ಲೆಯ ಏಳು ತಾಲ್ಲೂಕುಗಳಲ್ಲಿರುವ ಯಾವ ಯಾವ ವಿದ್ಯಾರ್ಥಿ / ವಿದ್ಯಾರ್ಥಿನಿಯರ ವಸತಿ ನಿಲಯಗಳ ರಿಪೇರಿಗಾಗಿ ಖರ್ಚು ಮಾಡಿರುವ ಹಣ ಎಷ್ಟು? (ವಸತಿ ನಿಲಯವಾರು ಮಾಹಿತಿ ನೀಡುವುದು)

## ಮೈಸೂರು–ಚಾಮರಾಜನಗರ ಜಿಲ್ಲೆಯಲ್ಲಿ ಪಡಿತರ ಚೀಟಿಗಳ ವಿತರಣೆ

**ಶ್ರೀ ಎಸ್.ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೦೮೮ (೧೨೬೫) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಇದುವರೆಗೆ ಎಷ್ಟು ಎ.ಪಿ.ಎಲ್/ಬಿ.ಪಿ.ಎಲ್ ಹಾಗೂ ಇತರೆ ರೀತಿಯ ಪಡಿತರ ಚೀಟಿಗಳನ್ನು ವಿತರಣೆ ಮಾಡಲಾಗಿದೆ;

(ಆ) ಈ ಕಾರ್ಡುಗಳ ವಿತರಣೆಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ತಿರಸ್ಕೃತಗೊಂಡ ಅರ್ಜಿಗಳ ಸಂಖ್ಯೆ ಎಷ್ಟು; ಪತ್ತೆ ಮಾಡಿ ರದ್ದುಪಡಿಸಿದ ಬಿಪಿಎಲ್ ಕಾರ್ಡುಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಹಾಡಿಗಳಲ್ಲಿ, ಪೋಡುಗಳಲ್ಲಿ ಮತ್ತು ಕಾಡಂಚಿನ ಗ್ರಾಮಗಳಲ್ಲಿ ವಾಸಿಸುವ ಗಿರಿಜನರು ತಮ್ಮ ಪಡಿತರ ಚೀಟಿಗಳನ್ನು ಅಡವಿಟ್ಟಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಬಗ್ಗೆ ಆಹಾರ ಇಲಾಖೆ ಅಧಿಕಾರಿಗಳು ಗಮನಹರಿಸಿ ದುರುಪಯೋಗ ತಪ್ಪಿಸಲು ಕ್ರಮ ಜರುಗಿಸಲಾಗುವುದೇ;

(ಉ) ಎಪಿಎಲ್ ಮತ್ತು ಬಿಪಿಎಲ್ ಕಾರ್ಡುಗಳ ವಿತರಣೆಯನ್ನು ತೀವ್ರಗೊಳಿಸಲಾಗುವುದೇ; ಪಡಿತರ ಚೀಟಿಗಳನ್ನು ನೀಡಲು ಆಧಾರ್ ಕಾರ್ಡ್‌ಗಳನ್ನು ಕೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ನಿಲ್ಲಿಸಲು ಸೂಚನೆ ನೀಡಲಾಗಿದೆಯೇ?

## ಕಳೆದ ೩ ವರ್ಷಗಳಲ್ಲಿ ಹೆಚ್.ಕೆ.ಡಿ.ಬಿ. ನೀಡಿದ ಹಣವೆಷ್ಟು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)** –

೧೦೮೯ (೧೨೭೦) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಕಳೆದ ೩ ವರ್ಷಗಳಿಂದ ಯೋಜನೇತರ ಅಡಿಯಲ್ಲಿ ಮತ್ತು ಇತರ ಮೂಲಗಳಿಂದ ಯಾವ ಯಾವ ಜಿಲ್ಲೆಗಳಿಗೆ ಎಷ್ಟೆಷ್ಟು ಹಣವನ್ನು ಒದಗಿಸಲಾಗಿದೆ; (ಮಾಹಿತಿ ನೀಡುವುದು)

(ಆ) ಅಭಿವೃದ್ಧಿ ಕೈಗೊಂಡ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಖರ್ಚಾದ ಹಣವೆಷ್ಟು; (ಕಾಮಗಾರಿವಾರು, ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಜಿಲ್ಲೆಗಳಿಗೆ ಅಭಿವೃದ್ಧಿಗಾಗಿ ಅವಶ್ಯಕತೆ ಇರುವ ಹಣ ಎಷ್ಟು;

(ಈ) ಅಭಿವೃದ್ಧಿ ಮಾಡದೆ ಉಳಿದ ಹಣ ಎಷ್ಟು; ಉಳಿತಾಯವಾಗಲು ಕಾರಣಗಳೇನು? (ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಗೆ ಎಸ್.ಇ.ಪಿ, ಎಸ್.ಟಿ.ಪಿ ಗೆ ಬಿಡುಗಡೆಯಾದ ಹಣದ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)** –

೧೦೯೦ (೧೨೬೮) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಎಸ್.ಇ.ಪಿ ಮತ್ತು ಟಿ.ಎಸ್.ಪಿ ಯೋಜನೆಯಲ್ಲಿ ವಿವಿಧ ಇಲಾಖೆಗಳ ಅನುದಾನವನ್ನು ಯೋಜನಾ ಇಲಾಖೆಯಿಂದ ಬಿಡುಗಡೆ ಮಾಡುತ್ತಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಯಾವ ಯಾವ ಕ್ಷೇತ್ರಗಳಲ್ಲಿ ಎಷ್ಟು ಹಣವನ್ನು ಯಾವ ಯಾವ ಇಲಾಖೆಗಳಿಗೆ ಹಂಚಿಕೆ ಮಾಡಲಾಗಿದೆಯೇ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುವಾರು ಎಷ್ಟು ಹಣ ಬಿಡುಗಡೆ ಮಾಡಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)

## ಡಾ: ನಂಜುಂಡಪ್ಪ ವರದಿಯ ಮೇಲೆ ಅನುದಾನ ಬಿಡುಗಡೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೮೯೧ (೧೨೬೭) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಹೈದರಾಬಾದ್-ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಡಾ: ನಂಜುಂಡಪ್ಪ ವರದಿಯನ್ವಯ ಬಿಡುಗಡೆಯಾದ ಅನುದಾನವೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ವರದಿಯನ್ವಯ ಕೈಗೊಂಡ ಯೋಜನೆಗಳವಾರು ಯಾವ ಕಾಮಗಾರಿಗಳಿಗೆ ಎಷ್ಟು ಹಣ ವೆಚ್ಚ ಮಾಡಲಾಗಿದೆ; (ವಿವರ ನೀಡುವುದು)

(ಇ) ಪ್ರಸ್ತುತ ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು? (ಅಭಿವೃದ್ಧಿವಾರು, ಜಿಲ್ಲಾ, ತಾಲ್ಲೂಕುವಾರು ಸಂಪೂರ್ಣ ವಿವರ ಒದಗಿಸುವುದು)

**ಬೆಂಗಳೂರು ಆಯುರ್ವೇದ ಮಹಾವಿದ್ಯಾಲಯದ ದುಸ್ಥಿತಿ**

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೮೯೨ (೧೨೬೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯ ಸಂಪೂರ್ಣವಾಗಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಆಸ್ಪತ್ರೆಯ ಆವರಣವು ಮಳೆಗಾಲದಲ್ಲಿ ನೀರು ತುಂಬಿಕೊಂಡು ಆಸ್ಪತ್ರೆಗೆ ಬರುವ ರೋಗಿಗಳಿಗೂ ಮತ್ತು ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ಸಿಬ್ಬಂದಿ / ವಿದ್ಯಾರ್ಥಿಗಳಿಗೂ ತೊಂದರೆ ಆಗುತ್ತಿರುವುದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು;

(ಇ) ಕಾಮಗಾರಿಯನ್ನು ಕೈಗೊಳ್ಳುವುದು ಯಾವಾಗ? (ಮಾಹಿತಿ ನೀಡುವುದು)

**ಜನರಿಕ್ ಔಷಧಿ ಮಳಿಗೆಗಳು**

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೮೯೩ (೧೬೦೮) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಮೆಡಿಕಲ್ ಕಾಲೇಜುಗಳ ವ್ಯಾಪ್ತಿಯಲ್ಲಿ ಎಷ್ಟು ಜನರಿಗೆ ಔಷಧಿ ಮಳಿಗೆಗಳನ್ನು ತೆರೆಯಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಜನರಿಕ್ ಔಷಧಿ ಮಳಿಗೆಗಳಿಂದ ಮಾರಾಟವಾದ ಜನರಿಕ್ ಔಷಧಿಗಳ ಗುಣಮಟ್ಟದ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಇ) ಸರ್ಕಾರಿ ವೈದ್ಯಕೀಯ ಕಾಲೇಜು ವ್ಯಾಪ್ತಿಯಲ್ಲಿ ಕೆಲವು ಕಡೆ ಜನರಿಕ್ ಔಷಧಿ ಮಳಿಗೆಗಳನ್ನು ತೆರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕಾಲಮಿತಿಯಲ್ಲಿ ಮಳಿಗೆಗಳನ್ನು ತೆರೆಯಲಾಗುವುದು;

(ಈ) ಜನರಿಕ್ ಔಷಧಿ ಮಳಿಗೆಗಳನ್ನು ತಾಲ್ಲೂಕು ಕೇಂದ್ರದ ಆಸ್ಪತ್ರೆಗಳಲ್ಲಿ ತೆರೆಯುವ ಬಗ್ಗೆ ಸರ್ಕಾರ ಯೋಜನೆ ರೂಪಿಸಿದೆಯೇ; ಈ ಯೋಜನೆಯ ರೂಪುರೇಷೆಗಳೇನು? (ವಿವರ ನೀಡುವುದು)

## ರಾಜ್ಯದಲ್ಲಿ ಮೊರಾರ್ಜಿ, ಕಿತ್ತೂರು / ಏಕಲವ್ಯ ವಸತಿ ಶಾಲೆಗಳ ಸಂಖ್ಯೆ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೮೯ಳ (೧೨೭೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೊರಾರ್ಜಿ ದೇಸಾಯಿ / ಕಿತ್ತೂರು ರಾಣಿ ಚೆನ್ನಮ್ಮ / ಏಕಲವ್ಯ ಮಾದರಿ / ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು;

(ಆ) ಇವುಗಳು ಯಾವ ಯಾವ ಸ್ಥಳಗಳಲ್ಲಿ ಇವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಒಂದು ವಸತಿ ಶಾಲೆಗೆ ಎಷ್ಟು ವಿದ್ಯಾರ್ಥಿಗಳನ್ನು ದಾಖಲಿಸಬಹುದು;

(ಈ) ಈ ವಸತಿ ಶಾಲೆಗಳಿಗೆ ಹೆಚ್ಚು ವಿದ್ಯಾರ್ಥಿಗಳು ಸೇರಲು ಬಯಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ರಾಜ್ಯದಲ್ಲಿ ಇನ್ನು ಹೆಚ್ಚು ವಸತಿ ಶಾಲೆಗಳನ್ನು ತೆರೆಯಲು ಸರ್ಕಾರ ಕ್ರಮ ವಹಿಸುವುದೇ? (ವಿವರ ನೀಡುವುದು)

## ಶುಶ್ರೂಷಕರ ಹುದ್ದೆ ಭರ್ತಿ ಮಾಡುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೫ (೧೨೮೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ೬೦೦ ಶುಶ್ರೂಷಕರ ಹುದ್ದೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸಿರುವುದು ನಿಜವೆ;

(ಆ) ಹಾಗಿದ್ದರೆ, ಎಷ್ಟು ಶುಶ್ರೂಷಕರ ನೇಮಕಾತಿ ಮಾಡಲಾಗಿದೆಯೇ; (ದಿನಾಂಕ ಸಹಿತ ವಿವರ ಒದಗಿಸುವುದು)

(ಇ) ಇಲಾಖೆಯಲ್ಲಿ ಖಾಲಿ ಇರುವ ಒಟ್ಟು ಶುಶ್ರೂಷಕರ ಸಂಖ್ಯೆ ಎಷ್ಟು? (ಪೂರ್ಣ ವಿವರ ನೀಡುವುದು)

## ಉತ್ತರ ಕರ್ನಾಟಕ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹೆಚ್ಚಿನ ಅನುದಾನ ನೀಡುವ ಬಗ್ಗೆ

**ಡಾ: ಮತ್ತಿಕಟ್ಟೆ ವೀರಣ್ಣ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೧೯೬ (೧೫೬೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

F-2 B/B

(ಅ) ರಾಜ್ಯದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ (ಪಿಹೆಚ್‌ಸಿ) ಸಂಖ್ಯೆ ಎಷ್ಟು; (ಜಿಲ್ಲಾವಾರು ಜನಸಂಖ್ಯೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಮತ್ತು ವಾರ್ಷಿಕ ಅನುದಾನದ ವಿವರಗಳನ್ನು ನೀಡುವುದು)

(ಆ) ಈ ಪ್ರಾದೇಶಿಕ ಅಸಮತೋಲನವನ್ನು ಸರಿದೂಗಿಸಲು ಸರ್ಕಾರವು ಕೈಗೊಳ್ಳಲಿರುವ ಕ್ರಮಗಳೇನು;

(ಇ) ಉತ್ತರ ಕರ್ನಾಟಕ ಸೌಲಭ್ಯ ವಂಚಿತ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹೆಚ್ಚಿನ ಅನುದಾನ ನೀಡಿ ಮೇಲ್ದರ್ಜೆಗೇರಿಸಲಾಗುವುದೇ ?

## ವಿಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಉತ್ತರ ಕರ್ನಾಟಕವು ಹಿಂದುಳಿದಿರುವ ಬಗ್ಗೆ

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೧೯೭೭ (೧೫೫೫) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಉತ್ತರ ಕರ್ನಾಟಕವು ಅತ್ಯಂತ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಸೌಲಭ್ಯ ವಂಚಿತ ಪ್ರದೇಶಗಳನ್ನು ಈ ನಿಟ್ಟಿನಲ್ಲಿ ಅಭಿವೃದ್ಧಿಪಡಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಹೆಚ್ಚಿನ ಬಂಡವಾಳವನ್ನು ಆಕರ್ಷಿಸಲು ಉತ್ತರ ಕರ್ನಾಟಕದಲ್ಲಿ ಹೆಚ್ಚಿನ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದೆ?

## ಡಿ.ದೇವರಾಜ ಅರಸು ಭವನಗಳನ್ನು ನಿರ್ಮಿಸುವ ಕುರಿತು

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೧೯೮ (೧೫೫೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಡಿ. ದೇವರಾಜ ಅರಸು ಭವನಗಳನ್ನು ನಿರ್ಮಿಸುವ ಯೋಜನೆಯನ್ನು ಸರ್ಕಾರವು ರೂಪಿಸಿದೆಯೆ;

(ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳು/ತಾಲ್ಲೂಕುಗಳಲ್ಲಿ ಈ ಭವನಗಳನ್ನು ನಿರ್ಮಿಸಲಾಗುತ್ತಿದೆ; (ಜಿಲ್ಲೆ/ ತಾಲ್ಲೂಕುಗಳ ವಿವರ ನೀಡುವುದು)

(ಇ) ಸದರಿ ಭವನಗಳ ನಿರ್ಮಾಣಕ್ಕಾಗಿ ಒದಿಗಸಲಾದ ಹಣವೆಷ್ಟು; ಈಗಾಗಲೇ ಎಷ್ಟು ಭವನಗಳನ್ನು ನಿರ್ಮಿಸಲಾಗಿದೆ; ಇನ್ನಿತರೆ ಸ್ಥಳಗಳಲ್ಲಿ ಈ ಭವನಗಳನ್ನು ನಿರ್ಮಿಸಲಾಗುವುದು ಯಾವಾಗ?

## ಗ್ರಾಮೀಣ ಪ್ರದೇಶದ ಒಕ್ಕಲಿಗ ಸ್ಪಷ್ಟೀಕರಣ ನೀಡುವುದು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೯೯ (೧೫೫೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗದ ದೃಢೀಕರಣ ಪತ್ರ ನಮೂನೆ/ಫಾರಂ–ಎಫ್ ಪಡೆಯಲು ಒಕ್ಕಲಿಗ ಜಾತಿಗೆ ಹಾಲಿ ಸರ್ಕಾರ ನಿಗದಿಪಡಿಸಿರುವ ಆದಾಯಮಿತಿ ಎಷ್ಟು;

(ಆ) ಒಕ್ಕಲಿಗರು ಕೇಂದ್ರ ಸರ್ಕಾರದ ಐ.ಎ.ಎಸ್ ಮತ್ತು ಐ.ಪಿ.ಎಸ್ ಇತರೆ ಹುದ್ದೆಗಳಿಗೆ ಅರ್ಜಿಹಾಕಲು ಓ.ಬಿ.ಸಿ ಪ್ರಮಾಣ ಪತ್ರ ಪಡೆಯುವ ಸಂಬಂಧ ಇರುವ ನಿಯಮಗಳು ಯಾವುವು;

(ಇ) ನಿಯಮದಲ್ಲಿನ ಗ್ರಾಮೀಣ ಪ್ರದೇಶದ ಒಕ್ಕಲಿಗರು ಅಂದರೆ ಯಾರು; ವಿವರವಾಗಿ ಮಾಹಿತಿಯೊಂದಿಗೆ ಸ್ಪಷ್ಟೀಕರಣ ನೀಡುವುದು;

(ಈ) ಇದರ ಬಗ್ಗೆ ರಾಜ್ಯದ ತಹಶೀಲ್ದಾರರಿಗೆ ಮಾಹಿತಿ ನೀಡಲಾಗಿದೆಯೆ;

(ಉ) ಓ.ಬಿ.ಸಿ ಪ್ರಮಾಣ ಪತ್ರವನ್ನು ಒಂದು ಬಾರಿ ಪಡೆದರೆ ಅದು ಎಷ್ಟು ವರ್ಷಗಳ ಅವಧಿಗೆ ಚಾಲ್ತಿಯಲ್ಲಿರುತ್ತದೆ.

(ಊ) ಸರ್ಕಾರವು ತಹಶೀಲ್ದಾರರಿಗೆ ಸರಿಯಾದ ಮಾಹಿತಿ ನೀಡದೆ ಇರುವುದರಿಂದ ಒಕ್ಕಲಿಗ ಜನಾಂಗಕ್ಕೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ನಬಾರ್ಡ್‌ನಿಂದ ಎನ್.ಜಿ.ಓ ಗಳಿಗೆ ಹಣ ಬಿಡುಗಡೆಯ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೧೦೦ (೧೫೫೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ಯಾವ ಯಾವ ಯೋಜನೆಗಳು ನಬಾರ್ಡ್ ನೆರವಿನಿಂದ ನಡೆಯುತ್ತಿವೆ; (ವಿವರ ನೀಡುವುದು)

(ಆ) ಈ ಯೋಜನೆಗಳಿಗೆ ಎನ್.ಜಿ.ಓ.ಗಳನ್ನು ತೊಡಗಿಸಿಕೊಳ್ಳಲಾಗಿದೆಯೆ;

(ಇ) ಹಾಗಿದ್ದರೆ, ಎಷ್ಟು ಎನ್.ಜಿ.ಓ.ಗಳನ್ನು ಯಾವ ಯೋಜನೆಗಳಿಗೆ ತೊಡಗಿಸಿಕೊಳ್ಳಲಾಗಿದೆ; (ಮಾಹಿತಿ ನೀಡುವುದು)

(ಈ) ಎನ್.ಜಿ.ಓ.ಗಳಿಗೆ ನೀಡುತ್ತಿರುವ ಸಹಾಯಧನ ಇತರೆ ಹಣ ಎಷ್ಟು?

## ಮೋಟಾರು ವಾಹನ ನಿರೀಕ್ಷಕ ನೇಮಕಾತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೧೦೧ (೧೫೫೮) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ ಮೋಟಾರು ವಾಹನ ನಿರೀಕ್ಷಕರ ಹುದ್ದೆಗಳು ಎಷ್ಟು;

(ಆ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕಾಲಮಿತಿ ಹಾಕಿಕೊಂಡಿದೆ;

(ಇ) ೨೦೦೧ ರಿಂದ ಇಲ್ಲಿಯವರೆಗೆ ಎಷ್ಟು ಮೋಟಾರು ವಾಹನ ನಿರೀಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ; (ವಿವರವಾಗಿ ಮಾಹಿತಿ ಕೊಡುವುದು)

(ಈ) ರಾಜ್ಯದಲ್ಲಿ ಇರುವ ಆರ್.ಟಿ.ಓ ಕಛೇರಿ, ಉಪಕಛೇರಿ ಮತ್ತು ಚೆಕ್‌ಪೋಸ್ಟ್‌ಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ದೂರವಾಣಿ ಸಂಖ್ಯೆಗಳೊಂದಿಗೆ ಮಾಹಿತಿ ನೀಡುವುದು)

## ಆರೋಗ್ಯ ಇಲಾಖೆಯಡಿ ಸಾರಿಗೆ ಸಂಸ್ಥೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೧೦೨ (೧೫೫೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಸಾರಿಗೆ ಸಂಸ್ಥೆ ಇದೆಯೆ;

(ಆ) ಇದ್ದರೆ, ಆ ಸಂಸ್ಥೆಯ ಕೇಂದ್ರ ಕಛೇರಿ ಎಲ್ಲಿದೆ;

(ಇ) ಸದರಿ ಸಾರಿಗೆ ಸಂಸ್ಥೆಯ ಕೇಂದ್ರೀಯ ಕಾರ್ಯಗಾರ ಎಲ್ಲಿದೆ ಅದರ ವಿಸ್ತೀರ್ಣವೆಷ್ಟು;

(ಈ) ಕೇಂದ್ರಿಯ ಕಾರ್ಯಗಾರದ ಜಮೀನನ್ನು ಒತ್ತುವರಿ ಮಾಡಲಾಗಿದೆಯೇ; (ವಿವರವಾದ ಮಾಹಿತಿ ಕೊಡುವುದು)

(ಉ) ಸದರಿ ಸಾರಿಗೆ ಸಂಸ್ಥೆಗೆ ಮಂಜೂರಾದ ಹುದ್ದೆಗಳು ಎಷ್ಟು; ಯಾವುವು; ಇದರಲ್ಲಿ ಖಾಲಿಯಿರುವ ಹುದ್ದೆಗಳು ಎಷ್ಟು? (ವಿವರವಾಗಿ ಹುದ್ದೆಯ, ಪದನಾಮ, ವೇತನ ಶ್ರೇಣಿ ವಿದ್ಯಾರ್ಹತೆ ಒಳಗೊಂಡಂತೆ ಮಾಹಿತಿ ನೀಡುವುದು)

## ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ನೌಕರರ ಸಮಸ್ಯೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೧೦೩ (೧೫೮೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ನೌಕರರ ಎನ್.ಪಿ.ಎಸ್ ಹಾಗೂ ಕೆ.ಜಿ.ಐ.ಡಿ ನೀಡದಿರಲು ಕಾರಣವೇನು;

(ಆ) ಈ ಶಾಲೆಗಳ ನೌಕರರ ಜೇಷ್ಠತಾ ಪಟ್ಟಿ ನೀಡುವುದರ ಜೊತೆಗೆ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ;

(ಇ) ಈ ವಸತಿ ಶಾಲೆಗಳ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

## ಸಿ.ಇ.ಟಿ ನಿಯಮಾನುಸಾರ ಕನಿಷ್ಠ ೦೭ ವರ್ಷ ವ್ಯಾಸಂಗ ಮಾಡದ ವಿದ್ಯಾರ್ಥಿಗಳ ವೃತ್ತಿ ಶಿಕ್ಷಣ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೧೦೪ (೧೫೬೦) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿ.ಇ.ಟಿ ನಿಯಮಾನುಸಾರ ಕನಿಷ್ಠ ೦೭ ವರ್ಷ ಕರ್ನಾಟಕದಲ್ಲಿ ವ್ಯಾಸಂಗ ಮಾಡದ ವಿದ್ಯಾರ್ಥಿಗಳಿಗೆ ವೃತ್ತಿ ಶಿಕ್ಷಣಕ್ಕೆ ಪ್ರವೇಶವಿರುವುದಿಲ್ಲವೆ;

(ಆ) ಹಾಗಿದ್ದಲ್ಲಿ, ಆಯುಷ್ ಇಲಾಖೆಯಲ್ಲಿ ಕಳೆದ ೦೭–೦೮ ವರ್ಷಗಳಿಂದ ಹೊರ ರಾಜ್ಯದ ವಿದ್ಯಾರ್ಥಿಗಳಿಗೆ ನಿರಂತರವಾಗಿ ನಕಲಿ ದಾಖಲಾತಿಗಳ ಮೂಲಕ ಪ್ರವೇಶ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇಂತಹ ವಿದ್ಯಾರ್ಥಿಗಳಿಗೆ ನಕಲಿ ಹಾಜರಾತಿ ನಕಲಿ ಅಂಕ, ನಕಲಿ ಆದೇಶ, ತಪ್ಪು ಮಾಹಿತಿ ನೀಡಿ ರಾಜೀವ್ ಗಾಂಧಿ ವಿಶ್ವ ವಿದ್ಯಾಲಯದಿಂದ ಪದವಿ ನೀಡುವ ವ್ಯವಸ್ಥಿತ ಜಾಲ ಕಾರ್ಯನಿರ್ವಹಿಸುತ್ತಿದೆ; ಅಲ್ಲದೇ ಕಿರಿಯ ವೈದ್ಯಾಧಿಕಾರಿಗಳ ತರಬೇತಿ ವೇತನವನ್ನು ಸುಳ್ಳು ದಾಖಲಾತಿ ಸೃಷ್ಟಿಸಿ ಪಡೆಯುವ ಮೂಲಕ ಸರ್ಕಾರಕ್ಕೆ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಸಂಪೂರ್ಣ ವಿವರ ನೀಡುವುದು)

## ನಕಲಿ ದಾಖಲಾತಿಗಳನ್ನು ನೀಡಿ ರಾಜೀವ ಗಾಂಧಿ ವಿ.ವಿ ಯಿಂದ ಪದವಿ ಪಡೆಯುತ್ತಿರುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೧೦೫ (೧೫೬೧) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜೀವ್‌ಗಾಂಧಿ ವಿಶ್ವವಿದ್ಯಾಲಯದಿಂದ ವಿದ್ಯಾರ್ಥಿಗಳಿಗೆ ನಕಲಿ ಹಾಜರಾತಿ ಅಂಕಪಟ್ಟಿ ಮತ್ತು ಆದೇಶವನ್ನು ನೀಡಿ ವಿಶ್ವ ವಿದ್ಯಾಲಯದಿಂದ ಪದವಿ ನೀಡುವ ವ್ಯವಸ್ಥಿತ ಜಾಲ ಕಾರ್ಯನಿರ್ವಹಿಸುತ್ತಿರುವುದನ್ನು ಸರ್ಕಾರ ಗಮನಿಸಿದೆಯೆ;

(ಆ) ಈ ಬಗ್ಗೆ ಆಯುಷ್ ಇಲಾಖೆಯ ನಿರ್ದೇಶಕರು ಸರ್ಕಾರಕ್ಕೆ ಪತ್ರ ಬರೆದು ಆರೋಪಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಹಾಗೂ ಸಮಗ್ರ ತನಿಖೆಗೆ ಕೋರಿರುತ್ತಾರೆ; ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ? (ಪ್ರಕರಣದ ಕುರಿತು ಸಂಪೂರ್ಣ ವಿವರ ನೀಡಿ)

## ೧೦೮ ಆರೋಗ್ಯ ಕವಚ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಕುಂದು ಕೊರತೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೧೦೬ (೧೫೮೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೦೮ ಆರೋಗ್ಯ ಕವಚ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ನೀಡಲಾಗುತ್ತಿರುವ ವೇತನ ಹಾಗೂ ಇತರೆ ಸೌಲಭ್ಯಗಳೇನು; (ಪೂರ್ಣ ವಿವರ ನೀಡುವುದು);

(ಆ) ಈ ಸಿಬ್ಬಂದಿಗಳಿಗೆ ನಿಗದಿಪಡಿಸಲಾಗಿರುವ ಕಾರ್ಯಾವಧಿ ಎಷ್ಟು;

(ಇ) ಸದರಿ ಯೋಜನೆಯ ನಿರ್ವಹಣೆಯನ್ನು ಯಾವ ಸಂಸ್ಥೆಯವರಿಗೆ ವಹಿಸಲಾಗಿದೆ; ಹಾಗೂ ಸಿಬ್ಬಂದಿಗಳಿಗೆ ಯಾವ ರೀತಿಯ ಸೌಲಭ್ಯಗಳನ್ನು ನೀಡಲು ಸಂಸ್ಥೆಯವರಿಗೆ ಸೂಚಿಸಲಾಗಿದೆ? (ಪೂರ್ಣ ವಿವರ ನೀಡುವುದು)

## ಜನರಿಕ್ ಔಷಧಿ ಮಳಿಗೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೧೧೦೭ (೧೫೬೩) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಸರ್ಕಾರಿ ವೈದ್ಯಕೀಯ ಕಾಲೇಜು ವ್ಯಾಪ್ತಿಯಲ್ಲಿ ತೆರೆದಿರುವ ಜನರಿಕ್ ಔಷಧಿ ಮಳಿಗೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಜನರಿಕ್ ಔಷಧಿಗಳ ಗುಣಮಟ್ಟದ ಸಂಬಂಧ ದೂರುಗಳು ಬಂದಿದೆಯೆ; ಬಂದಿದ್ದಲ್ಲಿ, ದೂರುಗಳ ಸಂಬಂಧ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಜನರಿಕ್ ಔಷಧಿ ಮಳಿಗೆಗಳನ್ನು ಹೆಚ್ಚು ಪ್ರಾರಂಭಿಸಲು ಸರ್ಕಾರ ಯೋಜನೆ ರೂಪಿಸಿದೆಯೆ; ಯೋಜನೆಯ ರೂಪುರೇಷೆಗಳೇನು?

## ನಕಲಿ ಆಯುರ್ವೇದ ಔಷಧ ಮಾರಾಟ ತಡೆಯುವ ಬಗ್ಗೆ ಹಾಗೂ ಸಾರ್ವಜನಿಕರು ಮೋಸ ಹೋಗದಂತೆ ವ್ಯಾಪಕ ಪ್ರಚಾರ ಮಾಡುವುದು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೧೦೮ (೧೬೦೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಕಲಿ ಆಯುರ್ವೇದ ಔಷಧಿಗಳೆಂದು ನಂಬಿಸಿ ವೃದ್ಧರನ್ನು ಮೋಸ ಮಾಡಿ ಹಣ ವಸೂಲಿ ಮಾಡುತ್ತಿದ್ದ ಘಟನೆಗಳು ಬೆಂಗಳೂರು ನಗರ, ವಿಲ್ಸನ್ ಗಾರ್ಡನ್; ರಾಜಾಜಿನಗರ ಇತರ ಕಡೆಗಳಲ್ಲಿ ಕಳೆದ ೨ ವರ್ಷಗಳಲ್ಲಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಆಯುರ್ವೇದ ಔಷಧಿಗಳನ್ನು ಮಾರಾಟ ಮಾಡಲು ಬೇಕಾಗುವ ವಿದ್ಯಾರ್ಹತೆಯೇನು;

(ಇ) ಈ ರೀತಿಯ ನಕಲಿ ಔಷಧಿಗಳನ್ನು ಮಾರಾಟ ಮಾಡುವುದನ್ನು ತಡೆಗಟ್ಟಲು ಹಾಗೂ ಸಾರ್ವಜನಿಕರು ಮೋಸಹೋಗದಂತೆ ವ್ಯಾಪಕ ಪ್ರಚಾರ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

## ರಾಜ್ಯ ಅನುಸೂಚಿತ ಜಾತಿ ಮತ್ತು ಬುಡಕಟ್ಟು ವರ್ಗಗಳ ಆಯೋಗಕ್ಕೆ ಹೆಚ್ಚು ಅಧಿಕಾರ ನೀಡುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೧೧೯ (೧೫೬೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಅನುಸೂಚಿತ ಜಾತಿ, ಬುಡಕಟ್ಟು ವರ್ಗಗಳ ಆಯೋಗವು ಸ್ಥಾಪಿತವಾಗಿದ್ದು ಯಾವಾಗ;

(ಆ) ಈ ಆಯೋಗವನ್ನು ಸ್ಥಾಪಿಸಿದ ಮೂಲ ಉದ್ದೇಶವೇನು;

(ಇ) ಅನುಸೂಚಿತ ಜಾತಿ ಬುಡಕಟ್ಟು ವರ್ಗಗಳಿಗೆ ಇದುವರೆಗೆ ಯಾವ ರೀತಿಯ ಅನುಕೂಲಗಳಾಗಿವೆ;

(ಈ) ಸದರಿ ಆಯೋಗವು ಸತ್ಯ ಶೋಧನಾ ಸಮಿತಿಗಷ್ಟೆ ಸೀಮಿತವಾಗಿದ್ದು, ಇನ್ನಷ್ಟು ಹೆಚ್ಚು ಅಧಿಕಾರ ನೀಡುವ ಬಗ್ಗೆ ಚಿಂತನೆ ಮತ್ತು ಅಭಿಪ್ರಾಯ ವ್ಯಕ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ಸಂಬಂಧ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?

## ಡೆಂಗ್ಯೂ ಮತ್ತು ಚಿಕನ್‌ಗುನ್ಯಾ ಖಾಯಿಲೆಗಳಿಗೆ ಆಯುರ್ವೇದ ಪದ್ಧತಿಯಲ್ಲಿನ ಔಷಧಿಯ ತಯಾರಿಕೆ ಮತ್ತು ವಿತರಣೆಯ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೧೧೦ (೧೫೬೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡೆಂಗ್ಯೂ ಮತ್ತು ಚಿಕನ್‌ಗುನ್ಯಾ ಖಾಯಿಲೆಗಳನ್ನು ಬರದಂತೆ ತಡೆಗಟ್ಟಲು ಹಾಗೂ ಜ್ವರ ಬಂದಾಗ ತೆಗೆದುಕೊಳ್ಳಲು ಆಯುರ್ವೇದದ ಔಷಧಿ ಪದ್ಧತಿಯಲ್ಲಿ ಸಮರ್ಪಕ ಔಷಧಿ ಇದೆಯೇ; ಇದ್ದಲ್ಲಿ ವಿವರ ನೀಡುವುದು;

(ಆ) ಪಪ್ಪಾಯ ಎಲೆಯ ಕಷಾಯ ರೋಗಿಗಳು ಸೇವಿಸಿದರೆ ಮೇಲ್ಕಾಣಿಸಿದ ಖಾಯಿಲೆಗಳು ಗುಣವಾಗುವುದು ವಿಚಾರ ಸಾರ್ವಜನಿಕರಲ್ಲಿ ರೂಢಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದು ನಿಜವೇ;

(ಇ) ನಿಜವಾಗಿದ್ದಲ್ಲಿ ಇದನ್ನು ಉಪಯೋಗಿಸುವ ಹಾಗೂ ತಯಾರಿಸುವ ವಿಧಾನವೇನು;

(ಈ) ಈ ಸಂಬಂಧ ಸೂಕ್ತ ಕಷಾಯ ತಯಾರಿಕೆ ಮತ್ತು ವಿತರಣೆ ಮಾಡಲಾಗುವುದೇ?

## ನೆಫ್ರೋಯುರಾಲಜಿ ಸಂಸ್ಥೆಯಲ್ಲಿ ಹೆಚ್ಚುವರಿಯಾಗಿ ರೇಡಿಯಾಲಜಿಯೂನಿಟ್ ತೆರೆಯುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೧೧೧ (೧೫೬೪) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿರುವ ಸರ್ಕಾರಿ ನೆಫ್ರೋಯುರಾಲಜಿ ವೈದ್ಯಕೀಯ ಸಂಸ್ಥೆಯಲ್ಲಿ (ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿದೆ) ರೇಡಿಯಾಲಜಿ ವಿಭಾಗದಲ್ಲಿ ತಜ್ಞವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಸಂಬಂಧ ರೇಡಿಯಾಲಜಿ ವಿಭಾಗಕ್ಕೆ ರೇಡಿಯಾಲಜಿ ತಜ್ಞರನ್ನು ನೇಮಿಸಲು ಹಾಗೂ ೨ ಯೂನಿಟ್‌ಗಳನ್ನು ಏಕಕಾಲಕ್ಕೆ ತೆರೆಯಲು ಮುಂದಾಗಿ ರೋಗಿಗಳಿಗೆ ಅನುಕೂಲಕಲ್ಪಿಸುವುದೇ?

## ಆರೋಗ್ಯ ಇಲಾಖೆಯಡಿ ಆರೋಗ್ಯ ಸುರಕ್ಷತಾ ಕಾಯ್ದೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೧೨ (೭೯೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಇಲಾಖೆಯಲ್ಲಿ "ಆರೋಗ್ಯ ಕಾಯ್ದೆಯಡಿ ಕರ್ತವ್ಯ ನಿರತರ ಜೇಷ್ಠತಾ ಪಟ್ಟಿಯನ್ನು ತಯಾರಿಸಲಾಗಿದೆಯೇ ; (ವಿವರ ನೀಡುವುದು)

(ಆ) ಸ್ನಾತಕೋತ್ತರ ಪದವಿ ಪಡೆದ ಎಷ್ಟು ಮಂದಿ ಸೇವಾ ನಿರತ ಆರೋಗ್ಯ ಸಹಾಯಕರು "ಆರೋಗ್ಯ ಸುರಕ್ಷತಾ ಕಾಯ್ದೆ" ಅಡಿ ಕೆಲಸ ಬಯಸಿ ಮನವಿ ಸಲ್ಲಿಸಿರುತ್ತಾರೆ ; ವಿವರ ನೀಡುವುದು) ಆ ಪೈಕಿ ಎಷ್ಟು ಮಂದಿಯನ್ನು ಅನ್ಯಪರ ಸೇವೆಯ ಮೇಲೆ ಆರೋಗ್ಯ ಸುರಕ್ಷತಾ ಕಾಯ್ದೆಯಡಿ ತೆಗೆದುಕೊಳ್ಳಲಾಗಿದೆ ; (ವಿವರ ಒದಗಿಸುವುದು)

(ಇ) ಮೇಲಿನ ಎರಡು ಪ್ರಕರಣಗಳಲ್ಲಿ ಆಹಾರ ಸುರಕ್ಷತಾ ಆಯುಕ್ತರು ಅಧಿಕಾರ ದುರುಪಯೋಗ ಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ಒದಗಿಸುವುದು)

## ಆರೋಗ್ಯ ಇಲಾಖೆಯ ಸಿಬ್ಬಂದಿ ಕೊರತೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೧೩ (೧೫೪೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಇಲಾಖೆಯಲ್ಲಿ ಮಂಜೂರಾದ ತಜ್ಞ ವೈದ್ಯರು, ಸಾಮಾನ್ಯ ವೈದ್ಯರು, ಆರೋಗ್ಯ ಸಹಾಯಕರು, ಪ್ರಥಮ, ದ್ವಿತಿಯ ದರ್ಜೆ ಸಹಾಯಕರು ಮತ್ತು ಡಿ ಗ್ರೂಫ್ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಇ) ಇಲಾಖೆಯಲ್ಲಿ ವೈದ್ಯರು, ಆರೋಗ್ಯ ಸಹಾಯಕರುಗಳ ಕೊರತೆಯಿಂದಾಗಿ, ಗ್ರಾಮೀಣ ಪ್ರದೇಶಗಳಲ್ಲಿ ಬಡವರಿಗೆ ಆರೋಗ್ಯ ಸೇವೆ ನೀಡುವಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು;

(ಈ) ವೈದ್ಯರಿಗೆ ನೀಡುತ್ತಿರುವ ವೇತನ ಕಡಿಮೆ ಎಂಬುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಅನಾರೋಗ್ಯ ಪೀಡಿತರ, ಬಡವರ ಸೇವೆ ಮಾಡುವ ತಾತ್ಕಾಲಿಕ, ಗುತ್ತಿಗೆ ಆಧಾರ ಆರೋಗ್ಯ ಸಹಾಯಕರ ವೇತನ ಹೆಚ್ಚಿಸುವುದು, ಖಾಯಂಗೊಳಿಸುವುದರೊಂದಿಗೆ ಅವರ ಹಿತ ಕಾಪಾಡಲು ಸರ್ಕಾರದ ನಿಲುವೇನು?

## ಹಿಂದುಳಿದ ವರ್ಗಗಳ ಇಲಾಖೆಯ ಕಾರ್ಯಕ್ರಮ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೧೪ (೧೫೭೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮ/ಯೋಜನೆಗಳು ಯಾವುವು; ಕಾಯ್ದಿರಿಸಿದ ಅನುದಾನ ಎಷ್ಟು;

(ಆ) ವಿವಿಧ ಯೋಜನೆಗಳ ಆಯ್ಕೆ ಪ್ರಕ್ರಿಯೆ ಯಾವ ರೀತಿಯಲ್ಲಿ ನಡೆಸಲಾಗುತ್ತಿದೆ;

(ಇ) ಫಲಾನುಭವಿ ಆಯ್ಕೆಯಲ್ಲಿ ಪಾರದರ್ಶಕತೆ ತರುವುದು ಸೇರಿದಂತೆ, ಸಮಾಜದ ಕಟ್ಟ ಕಡೆಯ ಅರ್ಹ ಫಲಾನುಭವಿಗೆ ಯೋಜನೆಯ ಪ್ರಯೋಜನ ತಲುಪಿಸಲು ಸರ್ಕಾರ ಕೈಗೊಂಡ ಕ್ರಮವೇನು;

(ಈ) ಕಳೆದ ೩ ವರ್ಷಗಳಲ್ಲಿ ಕೆಎಎಸ್/ಐಎಎಸ್/ಬ್ಯಾಂಕಿಂಗ್ ತರಬೇತಿಗಾಗಿ ಖರ್ಚಾದ ಅನುದಾನ ಎಷ್ಟು; ತರಬೇತಿ ಪಡೆದು ಉದ್ಯೋಗ ಪಡೆದ ಅಭ್ಯರ್ಥಿಗಳ ಸಂಖ್ಯೆ ಎಷ್ಟು; ತರಬೇತಿ ಪಡೆದ ಒಟ್ಟು ಅಭ್ಯರ್ಥಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)

## ಎಂಡೋಸಲ್ಫಾನ್ ಪೀಡಿತರ ಪುನರ್ವಸತಿ ಹಾಗೂ ಇತರೆ ಸೌಲಭ್ಯಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೧೫ (೧೫೭೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆರೋಗ್ಯ ಇಲಾಖೆಯಿಂದ ಗುರುತಿಸಿರುವ ಎಂಡೋಸಲ್ಫಾನ್ ಪೀಡಿತರ ಸಂಖ್ಯೆ ಎಷ್ಟು; (ಜಿಲ್ಲಾವಾರು–ತಾಲ್ಲೂಕುವಾರು ವಿವರ ನೀಡುವುದು)

(ಆ) ಎಂಡೋಸಲ್ಫಾನ್ ಪೀಡಿತರ ಪುನರ್ವಸತಿಗೆ ಹಾಗೂ ಅವರಿಗೆ ನೀಡುತ್ತಿರುವ ಇತರ ಸೌಲಭ್ಯಗಳೇನು; (ವಿವರ ನೀಡುವುದು)

(ಇ) ಎಂಡೋಸಲ್ಫಾನ್ ಪೀಡಿತರಿಗೆ ನೀಡುತ್ತಿರುವ ತಿಂಗಳ ಪೋಷಣಾ ಭತ್ಯೆ ಸರಿಯಾಗಿ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಎಂಡೋಸಲ್ಫಾನ್ ಪೀಡಿತರ ಹಿತ ಕಾಪಾಡಲು ಯಾವ ರೀತಿಯ ಪರಿಹಾರ ಮತ್ತು ಪುನರ್ವಸತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ; ಯಾವ ಕಾಲಮಿತಿಯೊಳಗೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರ ಯೋಚಿಸಿದೆ; ಈ ನಿಟ್ಟಿನಲ್ಲಿ ಸರ್ಕಾರದ ನಿಲುವುಗಳೇನು? (ವಿವರ ನೀಡುವುದು)

## ಸಿ.ಎಸ್.ಆರ್. ಯೋಜನೆಯ ಪ್ರಚಾರದ ಕೊರತೆ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೧೬ (೧೫೭೨) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರದ ಕಾರ್ಪೊರೇಟ್ ಸೋಶಿಯಲ್ ರೆಸ್ಪಾನ್ಸ್ (ಸಿ.ಎಸ್.ಆರ್) ಯೋಜನೆಯಡಿ ಬಿಪಿಎಲ್ ಕುಟುಂಬಗಳಿಗೆ ರಿಯಾಯಿತಿ ದರದಲ್ಲಿ ಅಡುಗೆ ಅನಿಲ ಸಂಪರ್ಕ ನೀಡುವ ಯೋಜನೆ ರಾಜ್ಯದಲ್ಲಿ ಜಾರಿಯಲ್ಲಿದೆಯೇ;

(ಆ) ಸದರಿ ಯೋಜನೆಯಡಿ ರಾಜ್ಯದ ಎಷ್ಟು ಬಿಪಿಎಲ್ ಕುಟುಂಬಗಳಿಗೆ ರಿಯಾಯಿತಿ ದರದಲ್ಲಿ ಅಡುಗೆ ಅನಿಲ ಸಂಪರ್ಕ ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಒಟ್ಟು ಅಡುಗೆ ಅನಿಲ ಸಂಪರ್ಕಗಳು ಎಷ್ಟು ; (ತಾಲ್ಲೂಕು–ಜಿಲ್ಲಾವಾರು ವಿವರ ನೀಡುವುದು)

(ಈ) ಕೇಂದ್ರದ ಬಡವರಿಗಾಗಿ ಇರುವ ಯೋಜನೆಯನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಅನುಷ್ಠಾನ ಮಾಡಲು ರಾಜ್ಯ ಸರ್ಕಾರವು ವಿಫಲವಾಗಿರುವುದು ನಿಜವೆ; ಯೋಜನೆಯ ಬಗ್ಗೆ ಪ್ರಚಾರ ಹಾಗೂ ಮಾಹಿತಿ ಕೊರತೆಯು ಯೋಜನೆ ಅನುಷ್ಠಾನದ ಹಿನ್ನಡೆಗೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ವಿದ್ಯಾರ್ಥಿನಿಲಯಗಳ ಮೂಲಸೌಕರ್ಯಗಳ ಕೊರತೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ)** –

೧೧೧೭ (೧೫೭೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ನಡೆಸುತ್ತಿರುವ ವಸತಿ ಶಾಲೆಗಳಲ್ಲಿ, ವಿದ್ಯಾರ್ಥಿಗಳ ವಸತಿ ನಿಲಯಗಳು ಹಾಗೂ ಮಹಿಳಾ ವಸತಿ ನಿಲಯಗಳ ಮೂಲ ಸೌಕರ್ಯಗಳಲ್ಲಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅಡಿಗೆ ಕೋಣೆ ಹಾಗೂ ಶೌಚಾಲಯಗಳು ಅತ್ಯಂತ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಎಷ್ಟು ವಸತಿ ನಿಲಯಗಳನ್ನು ಬಾಡಿಕೆ ಕಟ್ಟಡದಲ್ಲಿ ನಡೆಸಲಾಗುತ್ತಿದೆ ಹಾಗೂ ಇದಕ್ಕಾಗಿ ವಾರ್ಷಿಕ ಎಷ್ಟು ಹಣ ಖರ್ಚು ಮಾಡಲಾಗುತ್ತಿದೆ; (ವಿವರ ನೀಡುವುದು)

(ಈ) ಈ ಎಲ್ಲಾ ಬಾಲಕರ ವಸತಿ ನಿಲಯಗಳನ್ನು ಸ್ವಂತ ಕಟ್ಟಡಕ್ಕೆ ಸ್ಥಳಾಂತರಿಸಲು ಕಾಲಮಿತಿ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆಯೇ? (ವಿವರ ನೀಡುವುದು)

## ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳಿಗೆ ಪ್ರವೇಶಾತಿ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೧೧೮ (೧೫೭೪) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೫-೧೬ನೇ ಸಾಲಿನ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳಿಗೆ ಪ್ರವೇಶಾತಿಯ ಸಂದರ್ಭದಲ್ಲಿ ರಾಜ್ಯದ ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳಲ್ಲಿ ಲಭ್ಯವಿರುವ ಪ್ರವೇಶಾತಿಗಳ ಸಂಖ್ಯೆ ಎಷ್ಟು; (ಕಾಲೇಜುವಾರು ವಿವರ ನೀಡುವುದು)

(ಆ) ಈ ವರ್ಷ ವೈದ್ಯಕೀಯ ಪ್ರವೇಶಾತಿಗೆ ಲಭ್ಯವಿರುವ ಸೀಟುಗಳ ಸಂಖ್ಯೆಗಳಲ್ಲಿ ಕಡಿಮೆಯಾಗಿರಲು ಕಾರಣಗಳೇನು;

(ಇ) ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಲು ಎಂ.ಸಿ.ಐ. ದಿಂದ ಈ ಸೀಟುಗಳನ್ನು ಮಂಜೂರು ಮಾಡಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

## ಅಕ್ರಮ ನ್ಯಾಯಬೆಲೆ ಅಂಗಡಿಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೧೧೯ (೧೫೭೭) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

F-3 B/B

(ಅ) ರಾಜ್ಯದಲ್ಲಿ ಒಬ್ಬರ ಹೆಸರಿನಲ್ಲಿ ಪರವಾನಗಿ ಪಡೆದ ನ್ಯಾಯ ಬೆಲೆ ಅಂಗಡಿಗಳನ್ನು ಪಡೆದವರು ನಡೆಸದೆ ಬೇರೆಯುವರು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇಂತಹ ಅಕ್ರಮ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಈ ನಕಲಿ ಮಾಲೀಕರುಗಳ ವಿರುದ್ಧ ಈವರೆಗೆ ರಾಜ್ಯದಲ್ಲಿ ಎಷ್ಟು ಕ್ರಿಮಿನಲ್ ಕೇಸುಗಳನ್ನು ದಾಖಲಿಸಲಾಗಿದೆ? (ವಿವರ ನೀಡುವುದು)

## ಪಡಿತರ ಚೀಟಿ ಪಡೆಯಲು ಮಧ್ಯವರ್ತಿಗಳ ಹಾವಳಿ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೧೨೦ (೧೫೭೬) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜನ ಸಾಮಾನ್ಯರು ಪಡಿತರ ಚೀಟಿ ಪಡೆಯಲು ಅಗತ್ಯವಾದ ದಾಖಲೆಗಳನ್ನು ಒದಗಿಸಿದ್ದರೂ ಸಹ ಮಧ್ಯವರ್ತಿಗಳು ಜನರಿಗೆ ದಾರಿ ತಪ್ಪಿಸಿ ಹಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಆ) ಬಂದಿದ್ದಲ್ಲಿ, ಅಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ;

(ಇ) ಆ ಪೈಕಿ ಎಷ್ಟು ಜನರ ವಿರುದ್ಧ ಪೊಲೀಸ್ ಕೇಸ್ ದಾಖಲಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಇಂತಹ ಪ್ರಕರಣಗಳನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

## ವೈದ್ಯರ ಕಡ್ಡಾಯ ಗ್ರಾಮೀಣ ಸೇವೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೨೧ (೧೬೦೦) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವೈದ್ಯರ ಗ್ರಾಮಾಂತರ ಪ್ರದೇಶದ ಸೇವೆಯನ್ನು ಎಂದಿನಿಂದ ಕಡ್ಡಾಯಗೊಳಿಸಲಾಗಿದೆ; ಮತ್ತು ಪ್ರತಿ ವರ್ಷ ಗ್ರಾಮೀಣ ಸೇವೆಗೆ ಎಷ್ಟು ಜನ ವೈದ್ಯರು ಲಭ್ಯರಾಗುತ್ತಾರೆ;

(ಆ) ರಾಜ್ಯದಲ್ಲಿ ವೈದ್ಯರುಗಳನ್ನು ಗ್ರಾಮಾಂತರ ಸೇವೆಗೆ ನಿಯುಕ್ತಿಗೊಳಿಸುವಾಗ ಅನುಸರಿಸುವ ಮಾನದಂಡಗಳೇನು; ಮತ್ತು ವೈದ್ಯರನ್ನು ಗ್ರಾಮಾಂತರ ಸೇವೆಗೆ ನಿಯುಕ್ತಿಗೊಳಿಸುವ ಅಧಿಕಾರವನ್ನು ಯಾವ ಇಲಾಖೆಗೆ ನೀಡಲಾಗಿದೆ;

(ಇ) ರಾಜ್ಯದಲ್ಲಿ ವೈದ್ಯರನ್ನು ಗ್ರಾಮಾಂತರ ಸೇವೆಗೆ ನಿಯುಕ್ತಿಗೊಳಿಸಿದಾಗ ಅವರಿಗೆ ನೀಡುವ ವೇತನ ಅಥವಾ ಗೌರವ ಧನವೆಷ್ಟು; ಮತ್ತು ಅವರಿಗೆ ನೀಡುವ ಇತರೆ ಸೌಲಭ್ಯಗಳು ಯಾವುವು?

## ಉಡುಪಿ ಜಿಲ್ಲೆಯಲ್ಲಿ ಟಿ.ಎ.ಪಿ.ಸಿ.ಎಮ್.ಎಸ್. ನಿಂದ ವಿತರಣೆಯಾಗುವ ಪಡಿತರ ಸಾಮಗ್ರಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೨೨ (೧೬೦೧) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯಲ್ಲಿ ಟಿ.ಎ.ಪಿ.ಸಿ.ಎಮ್.ಎಸ್. ರಿಂದ ಪಡಿತರ ವಿತರಣಾ ಕೇಂದ್ರಗಳಿಗೆ ಪಡಿತರ ಸಾಮಗ್ರಿಗಳನ್ನು ಪೂರೈಸುವಾಗ

ಅವುಗಳ ತೂಕ, ಅಳತೆ ಮತ್ತು ಮಾಪನವನ್ನು ಪಡಿತರ ವಿತರಣಾ ಕೇಂದ್ರಗಳಲ್ಲೇ ಮಾಡಲಾಗುತ್ತಿದೆಯೇ; ಇಲ್ಲವಾದಲ್ಲಿ ಕಾರಣವೇನು;

(ಆ) ಉಡುಪಿ ಜಿಲ್ಲೆಯಲ್ಲಿ ಟಿ.ಎ.ಪಿ.ಸಿ.ಎಮ್.ಎಸ್. ನಿಂದ ಪಡಿತರ ವಿತರಣಾ ಕೇಂದ್ರಗಳಿಗೆ ಪೂರೈಕೆಯಾಗುತ್ತಿರುವ ಪಡಿತರ ಸಾಮಗ್ರಿಗಳ ಅಳತೆ, ತೂಕ ಮತ್ತು ಮಾಪನದಲ್ಲಿ ವ್ಯತ್ಯಾಸಗಳು ಕಂಡುಬರುತ್ತಿರುವ ಕುರಿತು ದೂರುಗಳು ಬಂದಿವೆಯೇ; ಬಂದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಕುಂದಾಪುರದ ಕೋಟೇಶ್ವರದಲ್ಲಿನ ಮೊರಾರ್ಜಿ ದೇಸಾಯಿ ಆಂಗ್ಲ ಮಾಧ್ಯಮ ವಸತಿ ಶಾಲೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೨೩ (೧೬೦೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಿಂದುಳಿದ ವರ್ಗಗಳ ಇಲಾಖೆಯ ಹಾಸ್ಟಲ್‌ಗಳ ಸಂಖ್ಯೆ ಎಷ್ಟು; ಮತ್ತು ಯಾವುವು; ಮತ್ತು ಇವುಗಳಿಗೆ ಮಾಸಿಕ ನೀಡುವ ಬಾಡಿಗೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನ ಕೊಟೇಶ್ವರದ ಕಾಗೇರಿಯಲ್ಲಿ ಮೊರಾರ್ಜಿ ದೇಸಾಯಿ ಆಂಗ್ಲ ಮಾಧ್ಯಮ ವಸತಿ ಶಾಲೆಯು ಎಂದು ಪ್ರಾರಂಭವಾಯಿತು; ಈ ಶಾಲೆಯು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆಯೇ; ಅಥವಾ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆಯೇ; ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದರೆ ಇದರ ಮಾಸಿಕ ಬಾಡಿಗೆ ಎಷ್ಟು;

(ಇ) ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನ ಕೊಟೇಶ್ವರದ ಕಾಗೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ಆಂಗ್ಲ ಮಾಧ್ಯಮ ವಸತಿ ಶಾಲೆಗೆ ಎಷ್ಟು ಎಕರೆ ಜಾಗವು ಯಾವ ಗ್ರಾಮದಲ್ಲಿ ಮಂಜೂರಾಗಿದೆ; (ಸರ್ವೆ ನಂಬರ್‌ವಾರು ವಿವರ ನೀಡುವುದು)

(ಈ) ಸದರಿ ತಾಲ್ಲೂಕಿನ ಕೊಟೇಶ್ವರದ ಕಾಗೇರಿಯಲ್ಲಿನ ಮೊರಾರ್ಜಿ ದೇಸಾಯಿ ಆಂಗ್ಲ ಮಾಧ್ಯಮ ವಸತಿ ಶಾಲೆಗೆ ಎಲ್ಲಾ ಮೂಲಭೂತ ಸೌಕರ್ಯಗಳು ಸರ್ಕಾರದಿಂದ ಮಂಜೂರಾಗಿದ್ದರೂ ಸಹ ಇಲ್ಲಿಯ ತನಕ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಾರಂಭಿಸದಿರಲು ಕಾರಣವೇನು?

## ಉಡುಪಿ ಜಿಲ್ಲೆಯಲ್ಲಿ ಸಂಚರಿಸುತ್ತಿರುವ ಖಾಸಗಿ ಹಾಗೂ ಸರ್ಕಾರಿ ಬಸ್ಸುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೨೪ (೧೬೦೨) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಸಂಚರಿಸುತ್ತಿರುವ ಖಾಸಗಿ ಸರ್ವಿಸ್ ಬಸ್ಸುಗಳ ಸಂಖ್ಯೆ ಎಷ್ಟು; ಮತ್ತು ಖಾಸಗಿ ಸಿಟಿ ಬಸ್ಸುಗಳ ಸಂಖ್ಯೆ ಎಷ್ಟು;

(ಆ) ಉಡುಪಿ ಜಿಲ್ಲೆಯಲ್ಲಿ ಸಂಚರಿಸುತ್ತಿರುವ ಸರ್ಕಾರಿ ಸರ್ವಿಸ್ ಬಸ್ಸುಗಳ ಸಂಖ್ಯೆ ಎಷ್ಟು; ಮತ್ತು ಸರ್ಕಾರಿ ಸಿಟಿ ಬಸ್ಸುಗಳ ಸಂಖ್ಯೆ ಎಷ್ಟು;

(ಇ) ಸದರಿ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಲ್ಲಿ ಖಾಸಗಿ ಬಸ್ಸುಗಳ ರಹದಾರಿ ಪರ್ಮಿಟ್ ಕೋರಿ ಬಂದ ಅರ್ಜಿಗಳೆಷ್ಟು; ಮತ್ತು ಅವುಗಳಲ್ಲಿ ಪರ್ಮಿಟ್ ನೀಡಲಾದ ಅರ್ಜಿಗಳೆಷ್ಟು; ಮತ್ತು ಪರ್ಮಿಟ್ ನೀಡಲು ಬಾಕಿ ಇರುವ ಅರ್ಜಿಗಳು ಎಷ್ಟು; (ತಾಲ್ಲೂಕುವಾರು, ವರ್ಷವಾರು, ಮಾರ್ಗವಾರು ವಿವರ ನೀಡುವುದು)

(ಈ) ಉಡುಪಿ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಲ್ಲಿ ಸರ್ಕಾರಿ ಬಸ್ಸುಗಳ ಸಂಚಾರಕ್ಕಾಗಿ ಕೆ.ಎಸ್.ಆರ್.ಟಿ.ಸಿ.ಯಿಂದ ರಹದಾರಿ ಪರ್ಮಿಟ್ ಕೋರಿ ಬಂದ ಅರ್ಜಿಗಳೆಷ್ಟು; ಮತ್ತು ಅವುಗಳಲ್ಲಿ ಪರ್ಮಿಟ್ ನೀಡಲಾದ ಅರ್ಜಿಗಳೇಷ್ಟು; ಮತ್ತು ಪರ್ಮಿಟ್ ನೀಡಲು ಬಾಕಿ ಇರುವ ಅರ್ಜಿಗಳೆಷ್ಟು? (ತಾಲ್ಲೂಕುವಾರು, ವರ್ಷವಾರು, ಮಾರ್ಗವಾರು ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಲ್ಲಿನ ಅವ್ಯವಹಾರ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೧೨೫ (೧೫೮೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಲ್ಲಿ ತಟ್ಟೆ, ಲೋಟ, ಚೆಂಬು, ಹಾಸಿಗೆ, ದಿಂಬು ಇತ್ಯಾದಿ ವಸ್ತುಗಳ ಪೂರೈಕೆ ಆಗಿದೆಯೇ;

(ಆ) ಇವುಗಳ ವಿತರಣೆಯಲ್ಲಿ ಭಾರಿ ಗೋಲ್‌ಮಾಲ್ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಆಹಾರ ಸುರಕ್ಷತಾ ಕಾಯ್ದೆ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೧೨೬ (೧೫೭೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಹಾರ ಸುರಕ್ಷತಾ ಕಾಯ್ದೆ ಎಂದಿನಿಂದ ಜಾರಿಗೆ ಬಂದಿದೆ; ಸದರಿ ಕಾಯ್ದೆಯ ರೂಪುರೇಷೆಗಳೇನು;

(ಆ) ಈ ಕಾಯ್ದೆಯ ಜವಾಬ್ದಾರಿಗಳೇನು; ಕೇಂದ್ರ ಸರ್ಕಾರದ ಆಹಾರ ಸುರಕ್ಷಾ ಕಾಯ್ದೆ ಜಾರಿಯಲ್ಲಿದ್ದರೂ ರಾಜ್ಯದಲ್ಲಿ ಈ ಕಾಯ್ದೆಯನ್ನು ಅನುಷ್ಠಾನಗೊಳಿಸುವಲ್ಲಿ ಆಗಿರುವ ವಿಳಂಬ ಹಾಗೂ ವಿಫಲತೆ ಆಗಿರುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಇತ್ತೀಚೆಗೆ ನಿಷೇಧಿಸಿದ ಮ್ಯಾಗಿ ರೀತಿಯಲ್ಲಿ ಸರ್ಕಾರ ಇತರೆ ಆಹಾರ ಪದಾರ್ಥಗಳ ಗುಣಮಟ್ಟ ಪರೀಕ್ಷಿಸುತ್ತಿದೆಯೇ;

(ಉ) ಗುಣಮಟ್ಟ ಸರಿಯಲ್ಲದ ಆಹಾರ ಪದಾರ್ಥಗಳ ಸೇವನೆಯಿಂದ ಜನರ ಆರೋಗ್ಯ ಹದಗೆಟ್ಟರೆ ಹೊಣೆ ಯಾರು; ಇದಕ್ಕೆ ಪರಿಹಾರಗಳೇನು?

## ಕೋಲಾರ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೧೨೭ (೧೫೮೩) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ವೈದ್ಯಕೀಯ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೧೨೮ (೧೫೮೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಈ ಶಾಲೆಗಳಲ್ಲಿ ಶಿಕ್ಷಕರ, ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಜಾರಿಯಾಗಿರುವ ಯೋಜನೆ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೧೨೯ (೧೫೮೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಜಾರಿ ಮಾಡಿರುವ ಯೋಜನೆಗಳು ಯಾವುವು;

(ಆ) ಕಳೆದ ವರ್ಷ ಚೈತನ್ಯ ಸಬ್ಸಿಡಿ ಕಂ ಸಾಫ್ಟ್ ಲೋನ್ ಯೋಜನೆಯನ್ನು ಜಾರಿ ಮಾಡಲಾಗಿದೆಯೇ; (ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾವಾರು, ಜಾತಿವಾರು ನೀಡುವುದು)

(ಇ) ಸ್ವಂತ ಉದ್ಯೋಗ ಮಾಡುವವರನ್ನು ಪ್ರೋತ್ಸಾಹಿಸಲು ಸರ್ಕಾರ ಜಾರಿ ಮಾಡಿರುವ ಯೋಜನೆಗಳು ಯಾವುವು;

(ಈ) ಜಾರಿ ಮಾಡಿದ್ದರೆ, ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾವಾರು, ಜಾತಿವಾರು ನೀಡುವುದು?

## ಗದಗ ಜಿಲ್ಲಾ ಆಸ್ಪತ್ರೆಯ ವೈದ್ಯರ ಹಾಗೂ ಇತರೆ ಸಿಬ್ಬಂದಿಯವರ ಮೂಲಭೂತ ಸೌಲಭ್ಯಗಳ ಕೊರತೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೧೧೩೦ (೧೫೮೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯರ ಹಾಗೂ ಇತರೆ ಸಿಬ್ಬಂದಿಯವರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಆಸ್ಪತ್ರೆಯಲ್ಲಿ ಎಷ್ಟು ಜನ ಸಾಮಾನ್ಯ ವೈದ್ಯರು, ತಜ್ಞ ವೈದ್ಯರು ಹಾಗೂ ಇನ್ನಿತರ ಸಿಬ್ಬಂದಿಯುವರು ಕಾರ್ಯನಿರ್ವಹಿಸುತ್ತಿದ್ದಾರೆ ;

(ಆ) ೩೦೦ ಬೆಡ್‌ಗಳನ್ನು ಹೊಂದಿರುವ ಈ ಜಿಲ್ಲಾ ಆಸ್ಪತ್ರೆಗೆ ನಿಯಮದ ಪ್ರಕಾರ ಎಷ್ಟು ವೈದ್ಯರುಗಳು, ತಜ್ಞ ವೈದ್ಯರುಗಳು, ಲ್ಯಾಬ್ ಟೆಕ್ನೀಶಿಯನ್‌ಗಳು ಹಾಗೂ ಇತರೆ ಸಿಬ್ಬಂದಿಗಳ ಅವಶ್ಯಕತೆ ಇದೆ ;

F-4 B/B

(ಇ) ಸದರಿ ಆಸ್ಪತ್ರೆಗೆ "ಡಯಾಲಿಸಿಸ್" ಯಂತ್ರ ಒದಗಿಸಲಾಗಿದೆಯೇ ; ಒದಗಿಸಿದ್ದಲ್ಲಿ, ಯಾವಾಗ ಒದಗಿಸಲಾಗಿದೆ ; ಇದನ್ನು ನಿರ್ವಹಿಸಲು ಬೇಕಾದ ತಾಂತ್ರಿಕ ಸಿಬ್ಬಂದಿಯನ್ನು ನೇಮಿಸಲಾಗಿದೆಯೇ ;

(ಈ) ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ಸುಟ್ಟ ಗಾಯಕ್ಕೆ ಚಿಕಿತ್ಸೆ ನೀಡುವ ಘಟಕಕ್ಕೆ ವಿಶೇಷ ತಜ್ಞ ವೈದ್ಯರನ್ನು ನೇಮಿಸಲಾಗಿದೆಯೇ ;

(ಉ) ಈ ಆಸ್ಪತ್ರೆಯ ವಿವಿಧ ವೈದ್ಯರುಗಳಿಗೆ, ಸ್ಟಾಫ್ ನರ್ಸ್‌ಗಳಿಗೆ, ಲ್ಯಾಬ್ ಟೆಕ್ನೀಶಿಯನ್‌ಗಳಿಗೆ ಮತ್ತು 'ಡಿ' ದರ್ಜೆ ನೌಕರರುಗಳಿಗೆ ವಸತಿ ಗೃಹಗಳನ್ನು ನಿರ್ಮಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವಾಗ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ಗದಗ–ಬೆಟಗೇರಿ ನಗರದ ಸಾರಿಗೆ ವ್ಯವಸ್ಥೆಯ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೧೧೩೧ (೧೫೮೪) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ಜಿಲ್ಲೆಯ ಮಲ್ಲಸಮುದ್ರ ವ್ಯಾಪ್ತಿಯಲ್ಲಿ ಸ್ಥಾಪಿತವಾಗಿರುವ ಜಿಲ್ಲಾ ಆಸ್ಪತ್ರೆಗೆ ಹೋಗಿ ಬರಲು ಸಾರಿಗೆ ವ್ಯವಸ್ಥೆಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆ ಬಗೆಹರಿಸಲು ಏನು ಕ್ರಮ ಕೈಗೊಳ್ಳಲಾಗುವುದು ; ಯಾವಾಗ ಕೈಗೊಳ್ಳಲಾಗುವುದು ;

(ಆ) ಗದಗ–ಬೆಟಗೇರಿ ಅವಳಿ ನಗರದಲ್ಲಿ ಬೆಟಗೇರಿಯಿಂದ ಕುರಹಟ್ಟಿ ಪೇಟೆ ಹಾಗೂ ಹಾತಲಗೇರಿ ಮಾರ್ಗವಾಗಿ ಸಿದ್ಧಲಿಂಗನಗರ ಬಡಾವಣೆಗೆ ಸಂಚರಿಸಲು ಬಸ್ಸುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವಾಗ ಬಸ್ಸುಗಳು ಸಂಚರಿಸಲು ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದಲ್ಲಿ ಡೆಂಗ್ಯೂ ಜ್ವರ ಕಾಯಿಲೆ ಹರಡುತ್ತಿರುವುದು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೩೨ (೧೫೮೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಡೆಂಗ್ಯೂ ಮತ್ತು ಇತರೆ ಸಾಂಕ್ರಾಮಿಕ ರೋಗಗಳು ವ್ಯಾಪಕವಾಗಿ ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ೬ ತಿಂಗಳುಗಳಿಂದ ಇಂತಹ ಕಾಯಿಲೆಗಳಿಗೆ ಬಲಿಯಾದವರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೆಂಗಳೂರು ನಗರ ರಾಮಮೂರ್ತಿನಗರ, ಕೆ.ಆರ್.ಪುರ ವ್ಯಾಪ್ತಿಯಲ್ಲಿ ಡೆಂಗ್ಯೂ ಜ್ವರ ಕಾಯಿಲೆ ವ್ಯಾಪಕವಾಗಿ ಹರಡುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಈ) ಹಾಗಿದ್ದರೆ, ಕಳೆದ ಮೂರು ತಿಂಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ;

(ಉ) ಕೆ.ಆರ್. ಪುರ ವ್ಯಾಪ್ತಿಯಲ್ಲಿ ಬರುವ ರಾಮಮೂತಿ ನಗರ, ಅಕ್ಷಯನಗರ, ಶಾಂತಿ ಲೇಔಟ್, ಆನಂದಪುರ ಇತರೆ ಕಡೆಗಳಲ್ಲಿ ಡೆಂಗ್ಯೂ ಜ್ವರ ವ್ಯಾಪಕವಾಗಿ ಹರಡಲು ಸಂಬಂಧಪಟ್ಟ ಅಧಿಕಾರಿಗಳ ಬೇಜವಬ್ದಾರಿ ಮತ್ತು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಈ ವಾಸಸ್ಥಳಗಳ ಸಾರ್ವಜನಿಕರು ಸ್ವಚ್ಛತೆ ಹಾಗೂ ಔಷಧಿ ಸಿಂಪಡಿಸುವ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಅನೇಕ ಬಾರಿ

ಮನವಿ ಮಾಡಿದ್ದರೂ, ಅಧಿಕಾರಿಗಳು ಸ್ಪಂದಿಸದೇ ಇರುವುದು ಸರ್ಕಾರ ಗಮನಿಸಿದೆಯೇ ; ಇಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ?

## ನಿರ್ಗತಿಕರಿಗೆ ಪಡಿತರ ಚೀಟಿ ವಿತರಣೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ) –**

೧೧೩೩ (೧೫೮೯) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳನ್ನು ಪಡೆಯಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು;

(ಆ) ಕಡುಬಡತನವಿದ್ದು ಅರ್ಹತೆಗಳು ಮತ್ತು ನಿಗದಿಪಡಿಸಿದ ಮಾನದಂಡಗಳಿಗೆ ಒಳಪಟ್ಟಿದ್ದರೂ ಬಿಪಿಎಲ್ ಪಡಿತರ ಚೀಟಿಗಳನ್ನು ಪಡೆಯಲು, ತಿಳುವಳಿಕೆ ಇಲ್ಲದೆ ಅವಕಾಶಗಳಿಲ್ಲದೆ ರಾಜ್ಯದ ಕೊಳಗೇರಿಗಳಲ್ಲಿ ರೈಲ್ವೆ ಪ್ಲಾಟ್‌ಫಾರಂಗಳಲ್ಲಿ, ಬಸ್ ನಿಲ್ದಾಣಗಳಲ್ಲಿ, ರಸ್ತೆ ಬದಿಗಳಲ್ಲಿ ಮತ್ತಿತರೆ ಪಾಳುಬಿದ್ದ ಕಟ್ಟಡಗಳಲ್ಲಿ ವಿಳಾಸ ರಹಿತರಾಗಿ ಬದುಕು ಸವೆಸುತ್ತಿರುವವರನ್ನು ಸರ್ಕಾರ ಪತ್ತೆ ಹಚ್ಚುವ ಮತ್ತು ಅಂತವರಿಗೆ ಬಿಪಿಎಲ್ ಕಾರ್ಡ್ ವಿತರಿಸುವ ಕಾರ್ಯಗಳನ್ನು ಕೈಗೊಂಡಿದಿಯೇ;

(ಇ) ಕೈಗೊಂಡಿದ್ದಲ್ಲಿ, ಜಿಲ್ಲಾವಾರು ವಿವರಗಳನ್ನು ನೀಡುವುದು;

(ಈ) ಕೈಗೊಳ್ಳದಿದ್ದಲ್ಲಿ, ಸರ್ಕಾರ ಇಚ್ಛಾಶಕ್ತಿಯನ್ನು ಪ್ರದರ್ಶಿಸಿ, ಇಂತಹ ನಿರ್ಗತಿಕರನ್ನು ಪತ್ತೆ ಹಚ್ಚಿ ಬಿಪಿಎಲ್ ಪಡಿತರ ಚೀಟಿಗಳನ್ನು ವಿತರಿಸುವ ಕಾರ್ಯಗಳನ್ನು ಸರ್ಕಾರ ಕೈಗೊಳ್ಳುವುದೇ:

## ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನಲ್ಲಿ ಜ್ಞಾನ ಸಂಪನ್ಮೂಲ ಕೇಂದ್ರದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು)** –

೧೧೩೪ (೧೫೯೧) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ಸುತ್ತೂರಿನಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದ "ಜ್ಞಾನ ಸಂಪನ್ಮೂಲ ಕೇಂದ್ರವನ್ನು" ಸ್ಥಾಪಿಸಲಾಗುವುದೆಂದು ಹೇಳಿದ್ದು, ಇದಕ್ಕೆ ಕೇಂದ್ರದ ಅನುಮತಿ ದೊರೆತಿರುವುದರ ಬಗ್ಗೆ ಕೇಂದ್ರ ಸರ್ಕಾರದ ಜೊತೆ ಪತ್ರ ವ್ಯವಹಾರ ಮಾಡಲಾಗಿದೆಯೇ; ಮಾಡಿದ್ದಲ್ಲಿ ಯಾವಾಗ; (ಬಂದಿರುವ ಉತ್ತರವೇನು ತಿಳಿಸುವುದು)

(ಆ) ಪ್ರೌಢಶಾಲೆಗಳಲ್ಲಿ ರೋಟೂಟ್ ಆಧಾರಿತ ಶಿಕ್ಷಣ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ರೋಟೂಟ್ ಶಿಕ್ಷಣ ಪ್ರಾಯೋಗಿಕ ಯೋಜನೆಯನ್ನು ಕೋರಿಯಾ ಇನ್ಸಿಟ್ಯೂಟ್ ಆಫ್ ಸೈನ್ಸ್ ಅಂಡ್ ಟೆಕ್ನಾಲಾಜಿಯ ಸೆಂಟರ್‌ನ (IKST) ಸಹಯೋಗದೊಂದಿಗೆ ಪ್ರಾರಂಭಿಸಲಾಗುವುದು ಎಂದು ಹೇಳಲಾಗಿದ್ದು, ಇದಕ್ಕೆ ಯೋಜನೆ ಇಲಾಖೆ ಹಾಗೂ ಆರ್ಥಿಕ ಇಲಾಖೆಯ ಅನುಮತಿ ಸಿಕ್ಕಿರುವುದು ನಿಜವೇ? (ವಿವರಿಸುವುದು)

## ಕೇಂದ್ರ ಸರ್ಕಾರದ ಆಹಾರ ಭದ್ರತಾ ಕಾಯ್ದೆ ಕುರಿತು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು)** –

೧೧೩೫ (೧೬೦೭) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

D/D-J.

(ಅ) ಕೇಂದ್ರ ಸರ್ಕಾರದ ಆಹಾರ ಭದ್ರತಾ ಕಾಯ್ದೆಯಡಿಯಲ್ಲಿ ಕೇಂದ್ರ ಸರ್ಕಾರವು ಪ್ರತಿ ಕ್ವಿಂಟಾಲ್ ಅಕ್ಕಿಯನ್ನು ರಾಜ್ಯ ಸರ್ಕಾರಕ್ಕೆ ಪ್ರತಿ ಕೆ.ಜಿ.ಗೆ ರೂ. ೩/- ರಂತೆ ಕ್ವಿಂಟಾಲ್‌ಗೆ ರೂ. ೩೦೦/- ರಂತೆ ನೀಡುತ್ತಿರುವುದು ನಿಜವೆ;

(ಆ) ಹಾಗಿದ್ದಲ್ಲಿ, ರಾಜ್ಯ ಸರ್ಕಾರವು ಅನ್ನಭಾಗ್ಯ ಯೋಜನೆಯಡಿಯಲ್ಲಿ ಸಂಪೂರ್ಣ ರಾಜ್ಯ ಸರ್ಕಾರವೇ ಹಣ ಭರಿಸುವ ರೀತಿ ಜಾಹೀರಾತು ನೀಡಿ ಕೇಂದ್ರ ಸರ್ಕಾರದ ನೆರವನ್ನು ಮರೆ ಮಾಚುತ್ತಿರುವುದು ಸರಿಯೇ;

(ಇ) ಕೇಂದ್ರ ಸರ್ಕಾರದ ಆಹಾರ ಭದ್ರತಾ ಕಾಯ್ದೆಯಡಿಯಲ್ಲಿ ರಾಜ್ಯದಲ್ಲಿ ಬಡವರಿಗೆ ನೀಡುವ ಸೀಮೆ ಎಣ್ಣೆಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡುವವರ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು; ಎಷ್ಟು ಜನರನ್ನು ಅರೆಸ್ಟ್ ಮಾಡಿ ಬಂದಿಸಲಾಗಿದೆ; ಬಂದಿತರಲ್ಲಿ ಜೈಲಿಗೆ ಹೋದವರೆಷ್ಟು; ಯಾವ ಯಾವ ಸೆಕ್ಷನ್‌ಗಳಲ್ಲಿ ಮೊಕದ್ದಮೆ ಹಾಕಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

## ಮೂತ್ರಪಿಂಡ ಸಮಸ್ಯೆ ಕುರಿತು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೩೭ (೧೫೫೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚೆಗೆ ಬೆಂಗಳೂರಿನಲ್ಲಿ ಮೂತ್ರಪಿಂಡ ಸಮಸ್ಯೆಗೆ ಒಳಗಾಗುತ್ತಿರುವವರ ಸಂಖ್ಯೆ ಹೆಚ್ಚುತ್ತಿದ್ದು, ಪ್ರತಿನಿತ್ಯ ೩ ಜನ ಮಂದಿಗೆ ಡಯಾಲಿಸಿಸ್ ಮಾಡಲು ರೋಗಿಗಳಿಗೆ ಸರಿಯಾದ ವ್ಯವಸ್ಥೆಯಿಲ್ಲದೆ, ಬಡವರು ಖಾಸಗಿ ಎನ್.ಹೆಚ್.ಗಳಲ್ಲಿ ಹೆಚ್ಚು ಶುಲ್ಕ ನೀಡಿ, ಡಯಾಲಿಸಿಸ್ ಮಾಡಿಸಿಕೊಳ್ಳಲು ಸಾಧ್ಯವಿಲ್ಲದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರತಿ ತಾಲ್ಲೂಕಿಗೊಂದು ಡಯಾಲಿಸಿಸ್ ಕೇಂದ್ರ ತೆರೆಯಲಾಗುವುದೆಂದು ಸರ್ಕಾರವು ಹೇಳಿಕೆ ನೀಡಿದ್ದು, ಎಷ್ಟು ತಾಲ್ಲೂಕುಗಳಲ್ಲಿ ಡಯಾಲಿಸಿಸ್ ಕೇಂದ್ರ ತೆರೆಯಲಾಗಿದೆ ? (ವಿವರ ನೀಡುವುದು)

## ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಕೈಗೊಂಡಿರುವ ಯೋಜನೆಗಳು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೧೩೭ (೧೫೪೯) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಕೈಗೊಂಡಿರುವ ಯೋಜನೆಗಳಾವುವು; ಪ್ರಸ್ತುತ ವರ್ಷದಲ್ಲಿ ಕೈಗೊಳ್ಳಲಿರುವ ಯೋಜನೆಗಳಿಗೆ ಎಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ;

(ಆ) ಕರಾವಳಿ ಅಭಿವೃದ್ಧಿ ಪ್ರಾಧಿಕಾರದಿಂದ ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲು ಅವಕಾಶವಿದೆ ಮತ್ತು ಕೈಗೊಳ್ಳುತ್ತಿರುವ ಯೋಜನೆಗಳನ್ನು ಯಾವ ಏಜೆನ್ಸಿ ಮೂಲಕ ಕಾರ್ಯಗತಗೊಳಿಸಲಾಗುವುದು;

(ಇ) ಕರಾವಳಿ ಜಿಲ್ಲೆಗಳ ಅಭಿವೃದ್ಧಿಗೆ ಪ್ರಾಧಿಕಾರದಿಂದ ಯಾವ ನೂತನ ಯೋಜನೆಗಳನ್ನು ಕೈಗೊಳ್ಳಲು ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆ;

(ಈ) ಕರಾವಳಿ ಅಭಿವೃದ್ಧಿ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಈ ಪ್ರಾಧಿಕಾರಕ್ಕೆ ಸದಸ್ಯರುಗಳನ್ನು ನೇಮಕ ಮಾಡದೇ ಇರುವುದರಿಂದ ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ಯೋಜನೆಗಳನ್ನು ಕೈಗೊಳ್ಳಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಕಾರ್ಡ್‌ಗಳನ್ನು ನೀಡುವುದು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೧೩೮ (೧೫೯೭) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಕಾರ್ಡ್‌ಗಳನ್ನು ನೀಡಲು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ಯಾವಾಗ ಕಾರ್ಡ್‌ಗಳನ್ನು ವಿತರಿಸಲಾಗುವುದು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಬಿ.ಪಿ.ಎಲ್. ಮತ್ತು ಎ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು ; ಅಂತ್ಯೋದಯ ಕಾರ್ಡ್‌ದಾರರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅನ್ನಭಾಗ್ಯ ಯೋಜನೆ ವಿತರಿಸಲು ಜಿಲ್ಲೆಯಲ್ಲಿರುವ ರೇಷನ್ ಅಂಗಡಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಎ.ಪಿ.ಎಲ್. ಕಾರ್ಡ್‌ದಾರರಿಗೆ ಪಡಿತರ ಮೂಲಕ ಸಿಗುವ ಸೌಲಭ್ಯಗಳಾವುವು ; ಸಾಮಾನ್ಯ ದರಕ್ಕಿಂತ ಎಷ್ಟು ದರ ರಿಯಾಯಿತಿಯಲ್ಲಿ ರೇಷನ್‌ಗಳನ್ನು ನೀಡಲಾಗುವುದು ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಟ್ರಕ್ ಟರ್ಮಿನಲ್‌ಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೧೩೯ (೧೫೯೮) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಟ್ರಕ್ ಟರ್ಮಿನಲ್‌ಗಳನ್ನು ರಚಿಸಲು ಪ್ರಸ್ತಾವನೆ ನೀಡಿದ್ದರೂ ಸರ್ಕಾರ ಕ್ರಮಕೈಗೊಳ್ಳದೇ ಇರುಲು ಕಾರಣವೇನು;

(ಆ) ದಕ್ಷಿಣ ಕನ್ನಡ ಜಿಲ್ಲೆಯ ಪಣಂಬೂರು ಬಂದರು ಮತ್ತು ಕೈಗಾರಿಕಾ ಪ್ರದೇಶದಲ್ಲಿ ಅತ್ಯಂತ ಹೆಚ್ಚು ಲಾರಿಗಳು ರಸ್ತೆಗಳಲ್ಲಿ ಪಾರ್ಕಿಂಗ್ ಮಾಡುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ತಂದಿದ್ದರೂ ಕ್ರಮ ಕೈಗೊಳ್ಳದೇ ಇರಲು ಕಾರಣವೇನು;

(ಇ) ಬಂದರ್‌ಗೆ ಸರಕು ಸಾಗಣಿಕೆ ಮಾಡುತ್ತಿರುವ ಅದಿರು ಇನ್ನಿತರ ಸಾಮಗ್ರಿಗಳು ನಿಗದಿತ ಭಾರಕ್ಕಿಂತ ಹೆಚ್ಚು ಭಾರಗಳನ್ನು ಸಾಗಿಸುತ್ತಿರುವ ಬಗ್ಗೆ ದಾಖಾಲಿಸಿಕೊಂಡ ಕೇಸುಗಳ ಸಂಖ್ಯೆ ಎಷ್ಟು;

(ಈ) ಕರ್ಕಶ ಶಬ್ದ ನಿಷೇಧಿಸಿದ್ದರೂ, ನಗರ ನಿಷೇಧಿತ ಭಾಗಗಳಲ್ಲಿ ಶಬ್ದಗಳಿಂದ ಪರಿಸರ ಮಾಲಿನ್ಯ ಉಂಟಾಗಿದ್ದು ಕೈಗೊಂಡ ಕ್ರಮಗಳೇನು; ಎಷ್ಟು ಕೇಸುಗಳನ್ನು ದಾಖಲು ಮಾಡಲಾಗಿದೆ? (ವಿವರ ನೀಡುವುದು)

## ಮಂಗಳೂರಿನಲ್ಲಿ ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಯ ಆವರಣದಲ್ಲಿ ಪ್ರತ್ಯೇಕ ಅಪಘಾತದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೧೪೦ (೧೫೫೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಯ ಆವರಣದಲ್ಲಿ ಪ್ರತ್ಯೇಕ ಅಪಘಾತ ಮತ್ತು ತುರ್ತು ಚಿಕಿತ್ಸೆ ಕೇಂದ್ರವನ್ನು ತೆರೆಯಲು ಬೇಡಿಕೆ ಇದ್ದು, ಇಲಾಖೆ ಕ್ರಮಕೈಗೊಳ್ಳದೇ ಇರಲು ಕಾರಣವೇನು;

(ಆ) ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಯಲ್ಲಿ ವರ್ಷ ಒಂದಕ್ಕೆ ಅಪಘಾತದಿಂದ ಉಂಟಾದ ಗಾಯಾಳುಗಳು ದಾಖಲಾಗಿರುವ ಸಂಖ್ಯೆ ಎಷ್ಟು; ವೈದ್ಯಕೀಯ ಕಾನೂನು ತನಿಖೆಗೆ ಒಳಪಡಿಸುವ ಕೇಸುಗಳ ಸಂಖ್ಯೆ ಎಷ್ಟು;

(ಇ) ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಯಲ್ಲಿ ಪ್ರಸ್ತುತ ಖಾಲಿ ಇರುವ ವೈದ್ಯರುಗಳ ಸಂಖ್ಯೆ ಎಷ್ಟು; ಖಾಲಿ ಇರುವ ಕಛೇರಿ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಭರ್ತಿ ಮಾಡಲು ಇಲಾಖೆಗೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಈ) ಸದರಿ ಆಸ್ಪತ್ರೆಯಲ್ಲಿ ಗುರುತು ಪತ್ತೆಹಚ್ಚಿದ ಶವಗಳು ಎಷ್ಟು; ಪ್ರಸ್ತತ ಎಷ್ಟು ಇರುವುದು; ಅವುಗಳನ್ನು ಎಷ್ಟು ಸಮಯದವರೆಗೆ ಆಸ್ಪತ್ರೆಯ ಶವಗಾರದಲ್ಲಿ ಇಡಲಾಗುವುದು? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸರ್ಕಾರಿ ನರ್ಸಿಂಗ್ ಕಾಲೇಜುಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೧೪೧ (೧೫೫೫) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸರ್ಕಾರಿ ನರ್ಸಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು; ಯಾವ ಯಾವ ಕೋರ್ಸುಗಳನ್ನು ಪ್ರಾರಂಭಿಸಲಾಗಿದೆ; ಪ್ರಸ್ತುತ ಪ್ರವೇಶ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಖಾಸಗಿ ನರ್ಸಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು; ಎಷ್ಟು ವಿದ್ಯಾರ್ಥಿಗಳಿಗೆ ಯಾವ ಯಾವ ಕೋರ್ಸುಗಳಿಗೆ ಪ್ರವೇಶ ನೀಡಲಾಗಿದೆ; (ಕಾಲೇಜುವಾರು ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ವೈದ್ಯಕೀಯ ಕಾಲೇಜುಗಳೆಷ್ಟು; ಪ್ರವೇಶ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಯಾವ ಯಾವ ಕಾಲೇಜುಗಳಲ್ಲಿ ಯಾವ ಯಾವ ಸಮುದಾಯದ ವಿದ್ಯಾರ್ಥಿಗಳಿಗೆ ನೀಡಲಾಗಿದೆ? (ಕಾಲೇಜುವಾರು ವಿವರ ನೀಡುವುದು)

## ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳ ಯೋಜನೆಗಳಿಗೆ ಅನುದಾನದ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೪೨ (೧೬೧೦) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಯಲ್ಲಿ ಯಾವ ಯಾವ ಯೋಜನೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ;

(ಆ) ೨೦೧೩–೧೪, ೨೦೧೪–-೧೫ನೇ ಸಾಲಿನಲ್ಲಿ ಈ ಯೋಜನೆಗಳಿಂದ ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; ಖರ್ಚಾದ ಅನುದಾನ ಎಷ್ಟು? (ಕ್ಷೇತ್ರಾವಾರು, ಯೋಜನೆವಾರು ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೪೩ (೧೬೧೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯವಿಲ್ಲದೆ ರೋಗಿಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ತಾಲ್ಲೂಕು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಈ ಆಸ್ಪತ್ರೆಗಳ ಕಟ್ಟಡಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೪೪ (೧೬೦೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿರಲು ಕಾರಣಗಳೇನು;

(ಆ) ಇದನ್ನು ಸರಿದೂಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಈ ಜಿಲ್ಲೆಯಲ್ಲಿ ಹಾಸ್ಟೆಲ್‌ಗಳ ನಿರ್ವಹಣೆಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

## ಬೆಳಗಾವಿಯಲ್ಲಿ ಐ.ಟಿ.ಪಾರ್ಕ್ ಪ್ರಾರಂಭಿಸುವುದು.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೧೪೫ (೧೬೧೫) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ನಗರದಲ್ಲಿ ಐ.ಟಿ.ಪಾರ್ಕ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ;

(ಆ) ಐ.ಟಿ.ಪಾರ್ಕ್ ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಹಾಗೂ ಹೊಸದಾಗಿ ಪ್ರಾರಂಭಿಸುವ ಸ್ಥಳಗಳಲ್ಲಿ ಸರ್ಕಾರದ ಸಹಾಯ ಹಸ್ತವೇನು?

## ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿರುವ ರಾಣಿ ಚೆನ್ನಮ್ಮ ಹೆಣ್ಣು ಮಕ್ಕಳ ವಸತಿ ಶಾಲೆಯಲ್ಲಿ ಮೂಲಭೂತ ಸೌಕರ್ಯ ಒದಗಿಸುವುದು.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೧೪೬ (೧೬೧೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿ ಇರುವ ರಾಣಿ ಚೆನ್ನಮ್ಮ ಹೆಣ್ಣು ಮಕ್ಕಳ ಶಾಲೆಯಲ್ಲಿ ವಿದ್ಯಾರ್ಥಿಗಳು ಮೂಲಭೂತ ಸೌಕರ್ಯಗಳಾದ ಆಟದ ಮೈದಾನ, ಶಾಲೆಗೆ ಹೋಗಲು ರಸ್ತೆ, ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಹಾಸ್ಟೆಲ್, ಕೊಠಡಿಗಳು, ಶುದ್ಧ ಕುಡಿಯುವ ನೀರು ಮೊದಲಾದ ಸೌಕರ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

---

(ಆ) ಹಾಗಿದ್ದಲ್ಲಿ, ಮೂಲ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ?

**ಅನರ್ಹ ಬಿ.ಪಿ.ಎಲ್. ಕಾರ್ಡುಗಳನ್ನು ರದ್ದುಪಡಿಸಿರುವ ಕುರಿತು**

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೧೪೭ (೧೬೧೩) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಬಿ.ಪಿ.ಎಲ್. ಪಡಿತರರ ಸಂಖ್ಯೆ ಎಷ್ಟು; ಹಾಗೂ ಇದರಿಂದ ಎಷ್ಟು ಜನ ಕಡು ಬಡವರಿಗೆ ಪ್ರಯೋಜನವಾಗಿರುವುದು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಎಷ್ಟು ಜನ ಅನರ್ಹ ಬಿ.ಪಿ.ಎಲ್ ಪಡಿತರ ಚೀಟಿಯನ್ನು ಹೊಂದಿದವರನ್ನು ಪತ್ತೆ ಹಚ್ಚಲಾಗಿದೆ;

(ಇ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಬಿ.ಪಿ.ಎಲ್. ಪಡಿತರ ಚೀಟಿ ಹೊಂದಿರುವವರ ಸಂಖ್ಯೆ ಎಷ್ಟು; ಇದರಿಂದ ಎಷ್ಟು ಜನ ಕಡು ಬಡವರಿಗೆ ಪ್ರಯೋಜನವಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಬೆಳಗಾವಿ ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಎಷ್ಟು ಜನ ಅನರ್ಹ ಬಿ.ಪಿ.ಎಲ್. ಪಡಿತರ ಚೀಟಿಯನ್ನು ಹೊಂದಿದವರನ್ನು ಪತ್ತೆ ಹಚ್ಚಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಇದರಿಂದ ಸರ್ಕಾರಕ್ಕೆ ಎಷ್ಟು ಹಣ ಉಳಿತಾಯವಾಗಿದೆ?

–

## ಸಕ್ಕರೆ ಕಾರ್ಖಾನೆಗಳಿಗೆ ತೂಕ ಮತ್ತು ಮಾಪನ ಇಲಾಖೆಯಿಂದ ಅನಿರೀಕ್ಷಿತವಾಗಿ ತಪಾಸಣೆ ಮಾಡಿರುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೧೪೮ (೧೬೧೨) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ವರ್ಷ ಹಾಗೂ ಈ ವರ್ಷ ರಾಜ್ಯದಲ್ಲಿ ತೂಕ ಮತ್ತು ಮಾಪನ ಇಲಾಖೆಯಿಂದ ಎಷ್ಟು ಸಕ್ಕರೆ ಕಾರ್ಖಾನೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ಮಾಡಲಾಗಿದೆ;

(ಆ) ರಾಜ್ಯದಲ್ಲಿ ಎಷ್ಟು ಸಕ್ಕರೆ ಕಾರ್ಖಾನೆಗಳು ಇರುತ್ತವೆ; ಅವುಗಳಲ್ಲಿ ಎಷ್ಟು ಸಕ್ಕರೆ ಕಾರ್ಖಾನೆಗಳ ತೂಕಗಳನ್ನು ಪರಿಶೀಲಿಸಲಾಗಿದೆ;

(ಇ) ತಪ್ಪು ಕಂಡು ಬಂದ ಎಷ್ಟು ಸಕ್ಕರೆ ಕಾರ್ಖಾನೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ;

(ಈ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಯಾವ–ಯಾವ ಕಾರ್ಖಾನೆಗಳ ಮೇಲೆ ಅನಿರೀಕ್ಷಿತ ಭೇಟಿ ನೀಡಿ ತೂಕ ತಪಾಸಣೆ ಮಾಡಲಾಗಿದೆ? (ಕಳೆದ ವರ್ಷ ಹಾಗೂ ಈ ವರ್ಷ ಮಹಿತಿ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಸಾರಿಗೆ ಸಂಸ್ಥೆಯ ಬಸ್ಸುಗಳ ಸಂಚಾರ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೧೧೪೯ (೧೨೫೩) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯವತಿಯಿಂದ ಸಂಚಾರ ಮಾಡುತ್ತಿರುವ ಬಸ್ಸುಗಳ ಸಂಖ್ಯೆ ಎಷ್ಟು;

(ಆ) ಆ ಪೈಕಿ ಚಾಲನೆ ಇಲ್ಲದೆ ಇರುವ ಬಸ್ಸುಗಳ ಸಂಖ್ಯೆ ಎಷ್ಟು; (ವಿಭಾಗೀಯ ಮಟ್ಟದ ಮಾಹಿತಿ ನೀಡುವುದು)

(ಇ) ಕಳೆದ ೨ ವರ್ಷಗಳಿಂದ ಸ್ಕ್ರ್ಯಾಫ್ ವಸ್ತುಗಳಿಂದ ನಿಗಮಕ್ಕೆ ಬಂದಿರುವ ಹಣ ಎಷ್ಟು?

## ಮೊಬೈಲ್ ಕ್ಲಿನಿಕ್ ಸೌಲಭ್ಯದ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) –**

೧೧೫೦ (೧೨೮೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ ಮೊಬೈಲ್ ಕ್ಲಿನಿಕ್ ಎಂಬ ಯೋಜನೆ ಇರುವುದು ನಿಜವೆ; ಇದ್ದಲ್ಲಿ ಎಲ್ಲೆಲ್ಲಿ ಕಾರ್ಯನಿರ್ವಹಿಸುತ್ತಿವೆ; (ವಿವರ ಒದಗಿಸುವುದು)

(ಆ) ಮೊಬೈಲ್ ಕ್ಲಿನಿಕ್ ಯೋಜನೆಯ ರೂಪುರೇಷೆಗಳೇನು; ಈ ಯೋಜನೆಯಲ್ಲಿರುವ ಸವಲತ್ತುಗಳಾವುವು? (ವಿವರ ಒದಗಿಸುವುದು)

## ಪಿ.ಹೆಚ್.ಎಸ್. ಬಸ್ಸುಗಳ ಸೌಲಭ್ಯವನ್ನು ಒದಗಿಸುವುದು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೫೧ (೧೬೦೫) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದ್ಮನಾಭನಗರದಿಂದ ವಿಧಾನಸೌಧಕ್ಕೆ ಈ ಹಿಂದೆ ಎಷ್ಟು ಪಿ.ಹೆಚ್.ಎಸ್. ಬಸ್ಸುಗಳು ಸಂಚಾರ ಮಾಡುತ್ತಿದ್ದವು;

(ಆ) ಪ್ರಸ್ತುತ ಪದ್ಮನಾಭನಗರದಿಂದ ವಿಧಾನಸೌಧಕ್ಕೆ ಪಿ.ಹೆಚ್.ಎಸ್. ಬಸ್ಸುಗಳ ಸಂಖ್ಯೆಯನ್ನು ಕಡಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ಹಿಂದೆ ಇದ್ದ ಪಿ.ಹೆಚ್.ಎಸ್. ಬಸ್ಸುಗಳ ಸುತ್ತುವಳಿಗಳನ್ನು ಪುನರಾರಂಭಗೊಳಿಸಲು ಇರುವ ತೊಂದರೆಗಳೇನು;

(ಈ) ಬಹುತೇಕ ಸರ್ಕಾರಿ ನೌಕರರು ಪಾಸ್‌ಗಳನ್ನು ಹೊಂದಿರುವುದರಿಂದ ಪಿ.ಹೆಚ್.ಎಸ್. ಸುತ್ತುವಳಿಯಲ್ಲಿ ಕಲೆಕ್ಷನ್ ಅನ್ನು ಮಾನದಂಡವಾಗಿ ಬಳಸುವುದು ಸಮಂಜಸವೇ; ಸಮಂಜಸವಲ್ಲದಿದ್ದರೆ, ಈ ಕೂಡಲೇ ಪಿ.ಹೆಚ್.ಎಸ್. ಬಸ್ಸುಗಳನ್ನು ಓಡಿಸಲು ಕ್ರಮ ಕೈಗೊಳ್ಳುವುದು?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ